
ಜನಮನದ ದನಿ


# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

19 ಜನವರಿ 2026 ಸೋಮವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 306 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629



ಬಿಗ್‌ಬಾಸ್ ಸೀಸನ್ 12ರ ಅವೃತ್ತಿಯ ವಿನ್ನರ್ ಗಿಲ್ಲಿ ನಟ ಅವರು ಬಿಗ್‌ಬಾಸ್ ಟ್ರೋಫಿಯನ್ನು ತಮ್ಮದಾಗಿಸಿಕೊಂಡ ಕ್ಷಣ...



ಪ್ರಾಯಶ್ಚಿತ » 2



ಒಪಿಎಸ್ ಜಾರಿಗೊಳಿಸದಿದ್ದರೆ ಕರ್ನಾಟಕ ಬಂದ್ » 3



ಸ್ವಾರ್ಥ ಮನೋಭಾವದಿಂದ ಹೊರ ಬನ್ನಿ : ಪುಷ್ಪಗಿರಿ ಶ್ರೀ » 4

# ನಮ್ಮನ್ನು ಪ್ರಶ್ನಿಸುವ ನೈತಿಕತೆ ಬಿಜೆಪಿಗಿಲ್ಲ

## ಗೂಂಡಾಗಿರಿ ಮಾಡುತ್ತಿದ್ದವರಿಂದ ಪಾಠ ಕಲಿಯಬೇಕಿಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ

• ಪ್ರಜೋದಯ ವರದಿ

**ಬೆಂಗಳೂರು:** ಬಿಜೆಪಿ ಅಧಿಕಾರದಲ್ಲಿದ್ದಾಗ ಯಾವ ಪ್ರಕರಣವನ್ನೂ ಸಿಬಿಐ ತನಿಖೆಗೆ ಒಪ್ಪಿಸಿರಲಿಲ್ಲ. ನಮ್ಮನ್ನು ಪ್ರಶ್ನೆ ಮಾಡಲು ಅವರಿಗೆ ಯಾವ ನೈತಿಕತೆ ಇಲ್ಲವೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಾಗ್ದಾಳಿ ನಡೆಸಿದರು.

ಬಳ್ಳಾರಿ ಪ್ರಕರಣದಲ್ಲಿ ಬಿಜೆಪಿ ಜನಾಂದೋಲನ ಮಾಡುತ್ತಿರುವ ಬಗ್ಗೆ ಮೈಸೂರಿನಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿದ ಅವರು, ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಯಾವುದಾದರೂ ಒಂದು ಪ್ರಕರಣವನ್ನಾದರೂ ಕೊಟ್ಟಿದ್ದರೆ ನಮ್ಮನ್ನು ಕೇಳಬಹುದು. ನಾವು ಅಧಿಕಾರದಲ್ಲಿದ್ದಾಗ ಸುಮಾರು ಏಳೆಂಟು ಪ್ರಕರಣಗಳನ್ನು ಸಿಬಿಐಗೆ ವಹಿಸಿದ್ದೆವು. ವಿರೋಧ ಪಕ್ಷದಲ್ಲಿರುವಾಗ ಯಾವ ಆಂದೋಲನ, ಪ್ರತಿಭಟನೆಗಳನ್ನು ಮಾಡುತ್ತಾರೆ ಎನ್ನುವುದು ಅವರ ಪಕ್ಷಕ್ಕೆ ಸೇರಿದ ವಿಚಾರ. ಅದಕ್ಕೆ ನಾವು ಉತ್ತರ ಕೊಡುತ್ತೇವೆ ಎಂದರು.



ಶ್ರೀರಾಮುಲು, ಜನಾರ್ಧನ ರೆಡ್ಡಿ ಅವರು ಕಾಂಗ್ರೆಸ್ ನಾಯಕರನ್ನು ಏಕ ವಚನದಲ್ಲಿ ವಾಗ್ದಾಳಿ ಮಾಡಿರುವ ಬಗ್ಗೆ ಪ್ರತಿಕ್ರಿಯಿಸಿ, ಬಿಜೆಪಿಯವರಿಗೆ ಸಂಸ್ಕೃತಿ ಇಲ್ಲ ಎನ್ನುವುದೂ ಸ್ಪಷ್ಟವಾಗಿ ಗೊತ್ತಾಗುತ್ತದೆ. ಜನಾರ್ಧನ ರೆಡ್ಡಿಗೆ ಬಳ್ಳಾರಿಗೆ ಬರಬಾರದೆಂದು ಏಕೆ ಹೇಳಿದ್ದರು. ರಿಪಬ್ಲಿಕ್ ಆಫ್ ಬಳ್ಳಾರಿ ಎಂದು ವರ್ತಿಸಿದವರು ಯಾರು. ಲೋಕಾಯುಕ್ತರಾಗಿದ್ದಾಗ ನ್ಯಾಯಮೂರ್ತಿ ಸಂತೋಷ್ ಹೆಗಡೆ ಅವರು ವರದಿ ಕೊಟ್ಟಿದ್ದಾರೆ ಎಂದರು.

ಲೋಕಸಭಾ ಚುನಾವಣೆಗೆ ಪ್ರಚಾರಕ್ಕೆ ಬಂದಾಗ ನಮಗೆ ಸಾರ್ವಜನಿಕ ಸಭೆ ನಡೆಸಲು ಎಲ್ಲೂ ಸ್ಥಳವನ್ನು ನೀಡಲಿಲ್ಲ. ಕೊನೆಗೆ ಕುರುಬರ ದೇವಸ್ಥಾನದ ಬಳಿ ಸಭೆ ನಡೆಸಿದೆವು. ಅವರಿಗೆ ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲ. ಸರ್ವಾಧಿಕಾರದಲ್ಲಿ ನಂಬಿಕೆ ಇದೆ ಎನ್ನಲು ಇದೊಂದು ಉದಾಹರಣೆ ಸಾಕು. ಸಂಸದೀಯ ವ್ಯವಸ್ಥೆಯಲ್ಲಿ ಅವರಿಗೆ ನಂಬಿಕೆಯಿಲ್ಲ. ಗೂಂಡಾಗಿರಿ ಮಾಡುತ್ತಿದ್ದವರಿಂದ ನಾವು ಪಾಠ ಕಲಿಯಬೇಕಿಲ್ಲ. ಕಾಂಗ್ರೆಸ್ ಪ್ರಜಾಪ್ರಭುತ್ವ ಸಂವಿಧಾನ ಹಾಗೂ ಅದರ ಆಶಯಗಳಲ್ಲಿ ನಂಬಿಕೆ ಇಟ್ಟಿರುವ ಪಕ್ಷ ಎಂದು ತಿಳಿಸಿದರು.

ಕಾಂಗ್ರೆಸ್ ರಿಪಬ್ಲಿಕ್ ಆಫ್ ಕರ್ನಾಟಕ ಮಾಡಿಕೊಂಡಿದ್ದಾರೆ ಎಂದು ಬಿಜೆಪಿ ಮಾಡಿರುವ ಆರೋಪಕ್ಕೆ ಪ್ರತಿಕ್ರಿಯೆ ನೀಡಿ, ಕಾಂಗ್ರೆಸ್ ಪ್ರಜಾಪ್ರಭುತ್ವ, ಸಂವಿಧಾನದ ಆಶಯಗಳಲ್ಲಿ ನಂಬಿಕೆ ಇಟ್ಟಿರುವ ಪಕ್ಷ. ಜನಾಂದೋಲನದ ಹಿಂದೆ ರಾಜಕೀಯ ಉದ್ದೇಶ ಬಿಟ್ಟರೆ ಬೇರೇನಿದೆ ಪ್ರಶ್ನಿಸಿದರು.

**ಕಾಯ್ದೆ ರದ್ದು ಮಾಡಲು ಅಧಿವೇಶನ**

ಹೊಸ ವರ್ಷದಲ್ಲಿ ಜಂಟಿ ಅಧಿವೇಶನ ಕಡ್ಡಾಯವಾಗಿ ಕರೆಯಬೇಕೆಂದು ಸಂವಿಧಾನ ಸ್ಪಷ್ಟವಾಗಿ ಹೇಳಿದೆ. ಅದಕ್ಕಾಗಿ ಕರೆದಿದ್ದೇವೆ. ನರೇಗಾ ಮೂಲಕ ಉದ್ಯೋಗ ಖಾತ್ರಿ, ಶಿಕ್ಷಣ, ಮಾಹಿತಿ ಹಕ್ಕು ಆಹಾರ ಭದ್ರತೆ ತಂದದ್ದು ಯುಪಿಎ ಸರ್ಕಾರ. ಅದನ್ನು ಹಾಳು ಮಾಡಲು ಹೊರಟಿಸುವುದನ್ನು ಖಂಡಿಸಲು ವಿಶೇಷ ಅಧಿವೇಶನ ಕರೆಯಲಾಗಿದೆ. ವಿಬಿ ಜಿ ರಾಮ್ ಜಿ ರದ್ದು ಮಾಡಬೇಕೆಂದು ಒತ್ತಾಯಿಸಲಾಗುತ್ತಿದೆ ಎಂದರು.

**ಉಪ್ಪು ತಿಂದವರು ನೀರು ಕುಡಿಯಲೇಬೇಕು**

ಅಬಕಾರಿ ಡಿಸಿ ಮೇಲೆ ಲೋಕಾಯುಕ್ತ ದಾಳಿಯಾಗಿರುವ ಬಗ್ಗೆ ಹಾಗೂ ಅಬಕಾರಿ ಸಚಿವರ ಹೆಸರು ಪ್ರಸ್ತಾಪವಾಗಿರುವ ಬಗ್ಗೆ ಮಾತಾಡಿ ಈ ಬಗ್ಗೆ ಕಾನೂನಿನ ಕ್ರಮಕ್ಕೆ ನಾವು ಅಡ್ಡಿಬರುವುದಿಲ್ಲ. ಉಪ್ಪು ತಿಂದವರು ನೀರು ಕುಡಿಯಲೇಬೇಕು. ನಾವು ಯಾರ ರಕ್ಷಣೆಯನ್ನೂ ಮಾಡುವುದಿಲ್ಲವೆಂದು ಸಿದ್ದರಾಮಯ್ಯ ಹೇಳಿದರು.

ಮದ್ಯ ಮಾರಾಟ ಸನ್ನದು ನೀಡಲು 25 ಲಕ್ಷ ಲಂಚ ಪಡೆಯುತ್ತಿದ್ದ ಬೆಂಗಳೂರು ಅಬಕಾರಿ ಜಿಲ್ಲೆ 8ರ ಅಬಕಾರಿ ಉಪ ಆಯುಕ್ತ ಜಗದೀಶ್ ನಾಯ್ಕ ಸೇರಿ ಮೂವರನ್ನು ಲೋಕಾಯುಕ್ತ ಪೊಲೀಸರು ಬಂಧಿಸಿರುವ ಬಗ್ಗೆ ಪ್ರತಿಕ್ರಿಯಿಸಿ, ಆಡಿಯೋದಲ್ಲಿ ಸಚಿವರ ಹೆಸರು ಪ್ರಸ್ತಾವಾಗಿರುವ ಬಗ್ಗೆ ನನಗೆ ಗೊತ್ತಿಲ್ಲ. ಬಿಜೆಪಿ ಸರ್ಕಾರದಲ್ಲಿ ಶೇ. 40ರಷ್ಟು ಭ್ರಷ್ಟಾಚಾರ ನಡೆಯುತ್ತಿದೆ ಎಂದು ಹೇಳಿದ್ದು ನಾನಲ್ಲ, ಗುತ್ತಿಗೆದಾರರು. ಅಂತಹ ಬಿಜೆಪಿಯವರು ನಮ್ಮ ಮೇಲೇನೂ ಆರೋಪಿಸುವುದೆಂದು ಪ್ರಶ್ನಿಸಿದರು.

## ನಾಲ್ಕು ನಿಗಮಗಳ ನೌಕರರ ಮುಷ್ಕರ

• ಪ್ರಜೋದಯ ವರದಿ



ಜ.29 ರಂದು

**ಬೆಂಗಳೂರು:** ವೇತನ ಹಿಂಬಾಕಿ ಮತ್ತು ವೇತನ ಪರಿಷ್ಕರಣೆ, ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕೆಎಸ್‌ಆರ್‌ಟಿಸಿ ಸೇರಿ ನಾಲ್ಕು ಸಾರಿಗೆ ನಿಗಮಗಳ ನೌಕರರು ಮತ್ತೆ ಮುಷ್ಕರ ಘೋಷಿಸಿದ್ದಾರೆ.

ನಾಲ್ಕು ಸರ್ಕಾರಿ ಸಾರಿಗೆ ನಿಗಮಗಳ ನೌಕರರು ಜನವರಿ 29 ರಂದು ಬೆಂಗಳೂರು ಚಲೋ ಪ್ರತಿಭಟನೆ ನಡೆಸುವುದಾಗಿ ಘೋಷಿಸಿದ್ದಾರೆ. ಸರ್ಕಾರದೊಂದಿಗೆ ಪದೇ ಪದೇ ಮಾತುಕತೆ ನಡೆಸಿದರೂ ಯಾವುದೇ ಫಲಿತಾಂಶ ಸಿಗದ ಹಿನ್ನೆಲೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಗಳ ಜಂಟಿ ಕ್ರಿಯಾ ಸಮಿತಿಯು ಈ ನಿರ್ಧಾರವನ್ನು ಪ್ರಕಟಿಸಿದೆ.

ಈಗಾಗಲೇ ಬೆಂಗಳೂರು ಚಲೋ ಚಳವಳಿ ಕುರಿತಂತೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರಿಗೆ ಜಂಟಿ ಕ್ರಿಯಾ ಸಮಿತಿ ಪತ್ರ ಬರೆದಿದೆ. ಕಳೆದ 38 ತಿಂಗಳಿನಿಂದ ವೇತನ ಹಿಂಬಾಕಿ ಬಂದಿಲ್ಲ. ಈ ಬಗ್ಗೆ ಹಲವು ಬಾರಿ ನಾವು ಮನವಿ ಮಾಡಿದರೂ ಅದಕ್ಕೆ ಸ್ಪಂದಿಸುತ್ತಿಲ್ಲ. ಹೀಗಾಗಿ ನಾವು ಹೋರಾಟದ ಹಾದಿ ಹಿಡಿಯಬೇಕಿದೆ ಎಂದು ಕ್ರಿಯಾಸಮಿತಿ ಅಧ್ಯಕ್ಷ ಅನಂತಸುಬ್ಬರಾವ್ ತಿಳಿಸಿದ್ದಾರೆ.

ಕಾರ್ಮಿಕ ಸಂಘಟನೆಗಳ ಪ್ರಕಾರ, ಸಾರಿಗೆ ನೌಕರರಿಗೆ ಕಳೆದ 38 ತಿಂಗಳಿನಿಂದ ಬಾಕಿ ವೇತನ ಬಂದಿಲ್ಲ. ಇದಲ್ಲದೆ, ಜನವರಿ 1, 2024 ರಿಂದ ಬರಬೇಕಿದ್ದ ವೇತನ ಪರಿಷ್ಕರಣೆ ಇನ್ನೂ ಜಾರಿಗೆ ಬಂದಿಲ್ಲ. ರಾಜ್ಯಾದ್ಯಂತ ದೈನಂದಿನ ಸಾರ್ವಜನಿಕ ಸಾರಿಗೆ ಸೇವೆಗಳನ್ನು ಖಚಿತಪಡಿಸಿಕೊಳ್ಳುವ ನೌಕರರಲ್ಲಿ ಈ ವಿಳಂಬವು ಆರ್ಥಿಕ ಒತ್ತಡವನ್ನು ಹೆಚ್ಚಿಸಿದೆ ಎಂದು ಯೂನಿಯನ್ ನಾಯಕರು ಹೇಳಿದ್ದಾರೆ.

ಜನವರಿ 29 ರಂದು ಬೆಳಗ್ಗೆ 10 ರಿಂದ ಸಂಜೆ 4 ರವರೆಗೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಾರಿಗೆ ನೌಕರರು ಪ್ರತಿಭಟನೆ ನಡೆಸಲಿದ್ದು, ಸಾರಿಗೆ ಸೇವೆಯಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ. ಈ ಪ್ರತಿಭಟನೆ ಶಾಂತಿಯುತವಾಗಿರುತ್ತದೆ ಎಂದು ಒಕ್ಕೂಟಗಳು ತಿಳಿಸಿವೆ. ಸಮಿತಿ ಸದಸ್ಯರಾದ ಎಚ್.ವಿ.ಅನಂತಸುಬ್ಬ ರಾವ್, ಬಿ.ಜಯದೇವ ಅರಸು, ಎಚ್.ಡಿ.ರೇವಪ್ಪ, ಜಗದೀಶ್ ಎಚ್.ಆರ್. ಮತ್ತು ರಾಜೇಂದ್ರ, ಗೌಡ ಜಿ.ಕೆ. ಅವರು ಸಾರಿಗೆ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆ ನೀಡಿದ್ದಾರೆ.

## ಗುಣಮಟ್ಟದ ವಿದ್ಯುತ್ ಪೂರೈಕೆಗೆ ಕ್ರಮ



• ಪ್ರಜೋದಯ ವರದಿ

**ನುಗ್ಗೇಹಳ್ಳಿ:** ರೈತರಿಗೆ ಮುಂದಿನ 20 ವರ್ಷಗಳವರೆಗೆ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡುವ ಉದ್ದೇಶದಿಂದ ಹೋಬಳಿಯ ತೆಂಕನಹಳ್ಳಿ ಬಳಿ 220 ಕೆವಿ ರಿಸೀವ್ ಸ್ಟೇಷನ್ ನಿರ್ಮಾಣಕ್ಕೆ ಶೀಘ್ರದಲ್ಲೇ ಭೂಮಿ ಪೂಜೆ ನೆರವೇರಿಸಲಾಗುವುದೆಂದು ಶಾಸಕ ಸಿ.ಎನ್. ಬಾಲಕೃಷ್ಣ ತಿಳಿಸಿದರು.

ಹೋಬಳಿಯ ತೆಂಕನಹಳ್ಳಿ ಗ್ರಾಮದಲ್ಲಿ 1.20 ಕೋ.ರೂ. ವೆಚ್ಚದ ಕಾಂಕ್ರೀಟ್ ಹಾಗು ಡಾಂಬರ್ ರಸ್ತೆ ಕಾಮಗಾರಿಗೆ ಭಾನುವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ಹಾಗು ಗುಣಮಟ್ಟದ ವಿದ್ಯುತ್ ಒದಗಿಸುವ ನಿಟ್ಟಿನಲ್ಲಿ ಈ ಯೋಜನೆ ರೂಪಿಸಲಾಗಿದೆ. 220 ಕೆವಿ ರಿಸೀವ್ ಸ್ಟೇಷನ್ ನಿರ್ಮಾಣಕ್ಕೆ ಈಗಾಗಲೇ ಇಂಧನ ಇಲಾಖೆಯಿಂದ ಅನುಮೋದನೆ ದೊರೆತಿದ್ದು, ಟೆಂಡರ್ ಪ್ರಕ್ರಿಯೆ ಆರಂಭಗೊಂಡಿದೆ. ಶೀಘ್ರದಲ್ಲೇ ಕಾಮಗಾರಿಗೆ ಚಾಲನೆ ನೀಡಲಾಗುವುದೆಂದು ಹೇಳಿದರು.

ಗ್ರಾಮದಲ್ಲಿ ಕಾಂಕ್ರೀಟ್, ಡಾಂಬರ್ ರಸ್ತೆ ಹಾಗೂ ಒಳಚರಂಡಿ ನಿರ್ಮಾಣಕ್ಕೆ 1.20 ಕೋ.ರೂ. ಅನುದಾನ ಬಿಡುಗಡೆಯಾಗಿದೆ. ಈ ಹಿಂದೆ ಚನ್ನರಾಯಪಟ್ಟಣ-ನುಗ್ಗೇಹಳ್ಳಿ ಮುಖ್ಯ ರಸ್ತೆಯಿಂದ ತೆಂಕನಹಳ್ಳಿ ಮೂಲಕ ಹುಲಿಕೆರೆವರೆಗೆ ಸುಮಾರು 4 ಕೋ.ರೂ. ವೆಚ್ಚದಲ್ಲಿ ಮುಖ್ಯ ರಸ್ತೆ ಅಭಿವೃದ್ಧಿಪಡಿಸಲಾಗಿದೆ. ಜೊತೆಗೆ ಶಾಲಾ ಕಟ್ಟಡ ಹಾಗೂ ಈಶ್ವರ ದೇವಾಲಯ ಜೀರ್ಣೋದ್ಧಾರಕ್ಕೆ ಅನುದಾನ ನೀಡಲಾಗಿದ್ದು, ಮುಂಬರುವ ಆರ್ಥಿಕ ವರ್ಷದಲ್ಲಿ ದೇವಾಲಯದ ಕಾಂಪೌಂಡ್ ನಿರ್ಮಾಣಕ್ಕೆ 3 ಲ.ರೂ. ಅನುದಾನ ನೀಡುವುದಾಗಿ ಭರವಸೆ ನೀಡಿದರು. ಲೋಕೋಪಯೋಗಿ ಇಲಾಖೆ ಸಹಾಯಕ ಇಂಜಿನೀಯರ್ ನಂಜುಂಡ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಾಜಶೇಖರ್ ಇನ್ನಿತರರಿದ್ದರು.

# ಬಿಜೆಪಿ-ಕಾಂಗ್ರೆಸ್ ನಡುವೆ ಮನರೇಗಾ-ಜಿ ರಾಮ್ ಜಿ

## ಕೈಪಡೆ ಆರೋಪಕ್ಕೆ ಕಮಲ ಪಡೆ ತಿರುಗೇಟು : ಸ್ಪಷ್ಟತೆ ಸಿಗದೆ ಸಾಮಾನ್ಯರ ಪರದಾಟ

• ಪ್ರಜೋದಯ ವರದಿ


**ಹಾಸನ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಮನರೇಗಾ)ಯನ್ನು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ರದ್ದುಗೊಳಿಸಿ, ಹೊಸದಾಗಿ ಜಾರಿಗೆ ತಂದಿರುವ ವಿಕಸಿತ ಭಾರತ ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್ (ವಿಬಿ-ಜಿ-ರಾಮ್-ಜಿ) ಕಾಯ್ದೆ ಜಾರಿಗೊಳಿಸಿದೆ. ಇದರ ವಿರುದ್ಧ ಹೋರಾಟಕ್ಕಿಳಿದಿರುವ ಕಾಂಗ್ರೆಸ್, ಪ್ರತಿಭಟನೆ ನಡೆಸುವುದು ಮಾತ್ರವಲ್ಲದೇ ವಿಶೇಷ ಅಧಿವೇಶನ ಕರೆದಿದೆ.

ಹೊಸ ಕಾಯ್ದೆ ವಿರುದ್ಧ ಹೋರಾಟ ರೂಪಿಸಲು ರಾಜ್ಯ ಕಾಂಗ್ರೆಸ್ ಸರ್ಕಾರ ತುರ್ತು ಸಚಿವ ಸಂಪುಟ ಸಭೆ ನಡೆಸಿ, ಜ.22 ರಿಂದ 31ರವರೆಗೆ ವಿಶೇಷ ಅಧಿವೇಶನಕ್ಕೆ ಮುಂದಾಗಿದೆ. ಜೊತೆಗೆ ರಾಜ್ಯಾದ್ಯಂತ ಹೋರಾಟಕ್ಕೆ ಕರೆ ನೀಡಿದೆ. ಇದಕ್ಕೆ ಪ್ರತಿಯಾಗಿ ಬಿಜೆಪಿ ರಾಜ್ಯಾದ್ಯಂತ ಕಾಯ್ದೆ ಬಗ್ಗೆ ಜನ ಜಾಗೃತಿ ಮೂಡಿಸುವ ಮೂಲಕ ತಿರುಗೇಟು ನೀಡುತ್ತಿದೆ. ಸಾಮಾನ್ಯ ಜನರಿಗೆ ಈ ಬಗ್ಗೆ ಸರಿ ಯಾದ ಸ್ಪಷ್ಟತೆ ಸಿಗದೆ ಗೊಂದಲಕ್ಕೆ ಸಿಲುಕಿದ್ದಾರೆ.

ಆಡಳಿತಾತ್ಮಕ ಹಿತದೃಷ್ಟಿಯಿಂದ ಹಾಗು ಕಾಲಾನುಕಾಲಕ್ಕೆ ಯೋಜನೆಯಲ್ಲಿ ಪಾರದರ್ಶಕತೆ ಮತ್ತು ಪರಿಣಾಮಕತೆ ತರುವ ನಿಟ್ಟಿನಲ್ಲಿ ನರೇಗಾ ಯೋಜನೆಯನ್ನು ವಿಬಿ-ಜಿ-ರಾಮ್-ಜಿ ಎಂದು ಪರಿಷ್ಕರಣೆ ಮಾಡಲಾಗಿದೆ ಎಂದು ಬಿಜೆಪಿ ಸ್ಪಷ್ಟನೆ ನೀಡುತ್ತಿದೆ. ಆದರೆ, ಇದನ್ನು ಒಪ್ಪದ ಕಾಂಗ್ರೆಸ್, ಕೇಂದ್ರ ಸರ್ಕಾರದ ನಡೆ ಒಕ್ಕೂಟ ವ್ಯವಸ್ಥೆಗೆ, ಸಂವಿಧಾನಕ್ಕೆ ವಿರುದ್ಧವಾಗಿದೆ. ಸಂವಿಧಾನದ 73ನೇ ತಿದ್ದುಪಡಿ ಪ್ರಕಾರ, ಗ್ರಾಮ ಸಭೆಗೆ ಮತ್ತು ಗ್ರಾಮ ಪಂಚಾಯಿತಿಗಿದ್ದ ಅಧಿಕಾರವನ್ನು ಕಿತ್ತು ಕೊಂಡಿದೆ. ಬಡವರು, ದಲಿತರು, ಮಹಿಳೆಯರು ಹಾಗು ಸಣ್ಣ ರೈತರಿಗೆ ಉದ್ಯೋಗದ ಹಕ್ಕನ್ನು ಕಸಿದು ಕೊಂಡಿರುವ ಹೊಸ ಕಾಯ್ದೆಯನ್ನು ಕೇಂದ್ರ ಸರ್ಕಾರ ವಾಪಾಸ್ ಪಡೆಯಬೇಕೆಂದು ಒತ್ತಾಯಿಸಿದೆ.

### ಹೊಸ ಯೋಜನೆಯ ಪ್ರಸ್ತಾಪಿತ ಅಂಶಗಳು

- ವಿಕಸಿತ ಭಾರತ-2047ರ ಸುಸ್ಥಿತ ಅಭಿವೃದ್ಧಿ
- ಕೆಲಸದ ದಿನವನ್ನು 100ರಿಂದ 125 ದಿನಕ್ಕೆ ಹೆಚ್ಚಿಸುವುದು
- ಭ್ರಷ್ಟಾಚಾರ ತಡೆಗೆ ಎಐ ತಂತ್ರಜ್ಞಾನ, ಜಿಪಿಎಸ್ ಟ್ರ್ಯಾಕಿಂಗ್
- ಒಂಟಿ ಮಹಿಳೆ, ಅಂಗವಿಕಲರು, 60 ವರ್ಷ ಮೇಲ್ಪಟ್ಟವರಿಗೆ, ತೃತೀಯ ಲಿಂಗಿಗಳಿಗೆ ವಿಶೇಷ ಗ್ರಾಮೀಣ ಉದ್ಯೋಗ ಖಾತ್ರಿ ಕಾರ್ಡ್
- 6 ತಿಂಗಳಿಗೊಮ್ಮೆ ಸಾಮಾಜಿಕ ಲೆಕ್ಕಪರಿಶೋಧನೆ





### ಜಿಲ್ಲೆಗೆ 32.70 ಕೋ.ರೂ. ಬಿಡುಗಡೆ

ನರೇಗಾ ಯೋಜನೆಯಲ್ಲಿ 2025-26ನೇ ಸಾಲಿನಲ್ಲಿ 9 ಕೋಟಿ ಮಾನವ ದಿನಗಳನ್ನು ನಿಗದಿ ಪಡಿಸಲಾಗಿದೆ. ಅದರಲ್ಲಿ 6.42 ಕೋಟಿ ಮಾನವ ದಿನಗಳು ಪ್ರಗತಿ ಸಾಧಿಸಿದೆ. ಕೂಲಿ ಪಾವತಿಗಾಗಿ ಕೇಂದ್ರ ಸರ್ಕಾರ 2025 ರ ಅಂತ್ಯಕ್ಕೆ 2,717 ಕೋ.ರೂ. ಬಿಡುಗಡೆ ಮಾಡಲಾಗಿದೆ. ಇದರಲ್ಲಿ ಹಾಸನ ಜಿಲ್ಲೆಗೆ ಒಟ್ಟು 32.70 ಕೋ.ರೂ. ಬಿಡುಗಡೆಯಾಗಿದೆ.

**ಕಾಂಗ್ರೆಸ್ ಆರೋಪಕ್ಕೆ ಬಿಜೆಪಿ ತಿರುಗೇಟು**

ವಿಬಿ-ಜಿ-ರಾಮ್-ಜಿ ಕಾಯ್ದೆಯು ಉದ್ಯೋಗ ದಿನಗಳನ್ನು ಏರಿಕೆ ಮಾಡಿದೆ. ಈ ಹಿಂದೆ 100 ದಿನ ಇದ್ದ ಕೆಲಸದ ದಿನಗಳಲ್ಲಿ 125 ದಿನಕ್ಕೆ ಏರಿಕೆ ಮಾಡಿದೆ. ಗ್ರಾಮ ಪಂಚಾಯಿತಿಗಳೇ ಈ ಯೋಜನೆಯ ಕೇಂದ್ರವಾಗಿದೆ. ಗ್ರಾಮ ಪಂಚಾಯಿತಿ ಅಧಿಕಾರ ಕಿತ್ತುಕೊಂಡಿಲ್ಲ. ಈ ಹಿಂದೆ ವೇತನ ವಿಳಂಬವಾಗುತ್ತಿತ್ತು. ಈಗ 14 ದಿನಗಳ ಒಳಗೆ ಪಾವತಿ ಕಡ್ಡಾಯಗೊಳಿಸಲಾಗವುದೆಂದು ಕಾಂಗ್ರೆಸ್‌ನವರ ಆರೋಪಗಳಿಗೆ ಬಿಜೆಪಿ ತಿರುಗೇಟು ನೀಡಿದೆ.

**ಹೊಸ ಕಾಯ್ದೆ ಅನ್ವಯ ಸೂಚಿಸಿದ ಸ್ಥಳದಲ್ಲಿ ಕೆಲಸ**

ನರೇಗಾ ಪ್ರಕಾರ ಇದ್ದ ಜಾಗದಲ್ಲಿಯೇ ಕೆಲಸ ಸಿಗುವ ಜೊತೆಗೆ, ಕಾರ್ಮಿಕರು ತಮ್ಮ ಮಕ್ಕಳನ್ನು ಹತ್ತಿರದ ಶಾಲೆಗೆ ಕಳುಹಿಸ ಬಹುದಿತ್ತು. ಆಸ್ತಿ ಸೃಜನೆ ಆಗುತ್ತಿತ್ತು. ಅವರಿಗೆ ಉದ್ಯೋಗ ಸಿಗುತ್ತಿತ್ತು. ಉದ್ಯೋಗ ಕೇಳಿ ಪಡೆಯುವ ಹಕ್ಕು ಅವರಿಗೆ ಇತ್ತು. ಆದರೆ, ಹೊಸ ಕಾಯ್ದೆ ಪ್ರಕಾರ, ಎಲ್ಲಿ ಅಧಿಸೂಚನೆ ಹೊರಡಿಸುತ್ತಾರೊ ಅಲ್ಲಿ ಕೆಲಸ ಕೊಡಬೇಕು. ಹೀಗೆ ಮಾಡಿ ಹಕ್ಕು ಕಸಿದುಕೊಳ್ಳುವ ಅಂಶ ಹೊಸ ಕಾಯ್ದೆಯಲ್ಲಿದೆ. ಹಳೆ ಕಾಯ್ದೆಯಿಂದ ಪ್ರತಿ ಗ್ರಾಮ ಕೂಡಾ ಲಾಭ ಪಡೆಯಬಹು ದಿತ್ತು. ಈಗ ಆ ಲಾಭ ಪಡೆಯಲು ಅವಕಾಶ ಇಲ್ಲ. ಸೂಚಿಸಿದ ಜಾಗದಲ್ಲಿ ಮಾತ್ರ ಕೆಲಸ ಮಾಡಬೇಕು. ಕಾರ್ಮಿಕರಿಗೆ ಇಡೀ ವರ್ಷ ಕೆಲಸ ಸಿಗುತ್ತಿತ್ತು. ಕೆಲಸ ಇಲ್ಲದೇ ಇದ್ದಾಗ ಕೆಲಸ ಕೊಡಬೇಕಿತ್ತು. ಈಗ ಕೃಷಿ ಚಟುವಟಿಕೆ ಇರುವ 60 ದಿನ ಕೆಲಸವನ್ನು ನಿಷೇಧಿಸಲಾಗಿದೆ.

**ರಾಜ್ಯಗಳ ಮೇಲೆ ಶೇ.40ರಷ್ಟು ಹೊರೆ**

ನರೇಗಾ ಕಾಯ್ದೆಯಲ್ಲಿ ಕೇಂದ್ರ ಸರ್ಕಾರವೇ ಪೂರ್ಣವಾಗಿ ವೆಚ್ಚ ಭರಿಸುತ್ತಿತ್ತು. ಈಗ ಕೇಂದ್ರ ಸರ್ಕಾರ ಶೇ.60, ರಾಜ್ಯ ಸರ್ಕಾರ ಶೇ.40 ಕೊಡಬೇಕಿದೆ. ಆ ಮೂಲಕ, ರಾಜ್ಯಗಳ ಮೇಲೆ ಹೊರೆ ಹೊರಿಸಲಾಗಿದೆ.

**ಪಾರದರ್ಶಕತೆ ಭರವಸೆ**

ನರೇಗಾ ಯೋಜನೆಯಲ್ಲಿದ್ದ ನಕಲಿ ಜಾಬ್ ಕಾರ್ಡ್, ಕಾಮಗಾರಿ ಮಾಡದೆ ಹಣ ಲಪಟಾಯಿಸುವುದನ್ನು ತಡೆಯಲು ಹೊಸ ಕಾಯ್ದೆಯಲ್ಲಿ ಬಯೋಮೆಟ್ರಿಕ್ ಪರಿಶೀಲನೆ, ಜಿಯೋ-ಸ್ಪೇಷಿಯಲ್ ಮೌಲ್ಯಮಾಪನ, ನೇರ ಡಿಜಿಟಲ್ ಪಾವತಿ, ಕೃತಕ ಬುದ್ಧಿ ಮತ್ತೆ ಆಧಾರಿತ ವಿಚಾರಣೆ ಮೂಲಕ ಪಾರದರ್ಶಕತೆಗೆ ಒತ್ತು ನೀಡಲಾಗಿದೆ ಎಂದು ವಿಜಿ-ಜಿ-ರಾಮ್-ಜಿ ಯೋಜನೆಯಲ್ಲಿ ಭರವಸೆ ನೀಡಲಾಗಿದೆ.

## ನೌಕರರ ಸಂಘದ ಅಧ್ಯಕ್ಷ ಕೃಷ್ಣೇಗೌಡ ಸ್ಪಷ್ಟನೆ

• ಪ್ರಜೋದಯ ವರದಿ

**ಹಾಸನ :** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರ ಕುರಿತು ಪತ್ರಕರ್ತರ ಪ್ರಶ್ನೆಗೆ ಉತ್ತರಿಸುವ ಭರದಲ್ಲಿ ಏಕ ವಚನ ಪ್ರಯೋಗ ಮಾಡಿದ್ದು, ಆ ಮಾತು ಉದ್ದೇಶ ಪೂರಕ ಆಗಿರಲಿಲ್ಲ. ಹಾಗಾಗಿ ಆ ಪದ ಬಳಕೆ ಬಗ್ಗೆ ವಿಷಾದ ವ್ಯಕ್ತಪಡಿಸುವುದಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಪಿ.ಕೃಷ್ಣೇಗೌಡ ಅವರು ಸ್ಪಷ್ಟನೆ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟದ ಬಗ್ಗೆ ತಾವು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಸಂದರ್ಭದಲ್ಲಿ ಪತ್ರಕರ್ತರು ಸರ್ಕಾರಿ ನೌಕರರ ಭವನದ ಉದ್ಘಾಟನೆಯನ್ನು ಏಕೆ ಮಾಡಿಲ್ಲವೆಂದು ಪ್ರಶ್ನಿಸಿದಾಗ, ರಾಜ್ಯಾಧ್ಯಕ್ಷರ ಅನುಮೋದನೆ ದೊರೆಯದ ಬಗ್ಗೆ ಪ್ರತಿಕ್ರಿಯಿಸುವ ಸಂದರ್ಭದಲ್ಲಿ ಏಕ ವಚನ ಬಳಕೆ ಮಾಡಿದ್ದು, ನಂತರ ತಮ್ಮ ಅರಿವಿಗೆ ಬಂದಿದ್ದು, ಅದಕ್ಕಾಗಿ ಅವರಲ್ಲಿ ವಿಷಾದ ವ್ಯಕ್ತಪಡಿಸುವುದಾಗಿ ತಿಳಿಸಿದ್ದಾರೆ.

## ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡಲ್ಲ: ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಸಕಲೇಶಪುರ :** ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಯೇ ನನ್ನ ಗುರಿ. ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ. ಈ ಸಂಬಂಧ ರಾಜ್ಯ ಕಾಂಗ್ರೆಸ್ ಸರ್ಕಾರದ ಜೊತೆಗೂ ಚರ್ಚಿಸಿ ಅನುದಾನ ಹಾಗು ಯೋಜನೆಗಳನ್ನು ತರುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.



ತಾಲ್ಲೂಕಿನ ಹಾನುಬಾಳು ಹೋಬಳಿಯ ದೇವಾಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನೂತನವಾಗಿ ಅಭಿವೃದ್ಧಿ ಪಡಿಸಿದ ರಸ್ತೆಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಕೆಲವರು ಅಭಿವೃದ್ಧಿಯಲ್ಲೂ ರಾಜಕೀಯ ಮಾಡುತ್ತಾರೆ. ಆದರೆ, ನನಗೆ ಅದು ಬೇಕಿಲ್ಲ. ಕಷ್ಟದಲ್ಲಿರುವವರಿಗೆ ನೆರವು ನೀಡುವ ಮಾನವೀಯತೆ ನನಗಿದೆ. ಕ್ಷೇತ್ರದ ಜನರ ನಿರೀಕ್ಷೆಗೆ ತಕ್ಕಂತೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆಂದು ತಿಳಿಸಿದರು.


ಈ ಭಾಗದಲ್ಲಿ ಹಲವಾರು ವರ್ಷಗಳಿಂದ ಸಾರ್ವಜನಿಕರಿಗೆ ತೀವ್ರ ಅನಾನುಕೂಲವಾಗುತ್ತಿತ್ತು. ನಾನೇ ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ರಸ್ತೆಯ ಸ್ಥಿತಿಯನ್ನು ಪರಿಶೀಲಿಸಿ ಅನುದಾನ ಮೀಸಲಿಟ್ಟಿದ್ದೇನೆ. ದೇವಾಲದಕೆರೆ, ದೇವರುಂದ, ಅತ್ತಿಬಿಡು, ಬಾಣಿಬೈಲು ಹೊರಗಿನ ರಸ್ತೆಯನ್ನು 3 ಕೋ.ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗಿದೆ. ಜೊತೆಗೆ

» ನಾಲ್ಕನೇ ಪುಟದಲ್ಲಿ

## ಬೋನಿಗೆ ಬಿದ್ದ ಹೆಣ್ಣು ಚಿರತೆ

• ಪ್ರಜೋದಯ ವರದಿ

**ಅರಸೀಕೆರೆ :** ತಾಲ್ಲೂಕಿನ ಅಂಚೆಕೊಪ್ಪಲು ಗ್ರಾಮದಲ್ಲಿ ಕಳೆದ ಹಲವು ದಿನಗಳಿಂದ ಸಂಚರಿಸುತ್ತಿದ್ದ ಮೂರು ವರ್ಷದ ಹೆಣ್ಣು ಚಿರತೆ ಅರಣ್ಯ ಇಲಾಖೆ ಇಟ್ಟಿದ್ದ ಬೋನಿನಲ್ಲಿ ಸೆರೆಯಾಗಿದೆ.



ಗ್ರಾಮದ ಸುತ್ತಮುತ್ತ ನಿರಂತರವಾಗಿ ಚಿರತೆಗಳು ಕಾಣಿಸಿಕೊಳ್ಳುತ್ತಿದ್ದ ಹಿನ್ನಲೆ ಜನರು ಹೊಲ-ಗದ್ದೆಗಳಿಗೆ ಹೋಗಲು, ರಾತ್ರಿ ಮನೆಯಿಂದ ಹೊರ ಬರಲು ಕೂಡ ಭಯಪಡುವ ಸ್ಥಿತಿ ನಿರ್ಮಾಣವಾಗಿತ್ತು. ಈ ಬಗ್ಗೆ ಗ್ರಾಮಸ್ಥರು ಅರಣ್ಯ ಇಲಾಖೆಗೆ ದೂರು ನೀಡಿದ್ದರಿಂದ, ಇಲಾಖೆ ಮುನ್ನೆಚ್ಚರಿಕೆ ಕ್ರಮವಾಗಿ ಚಿರತೆ ಸೆರೆಗೆ ಬೋನು ಅಳವಡಿಸಿದರು. ಶನಿವಾರ ತಡರಾತ್ರಿ ಬೋನ್‌ಗೆ ಹೆಣ್ಣು ಚಿರತೆ ಸಿಲುಕಿರುವುದು ತಿಳಿದ ತಕ್ಷಣ ಸ್ಥಳಕ್ಕೆ ಬಂದ ಅರಣ್ಯ ಇಲಾಖೆ ಸಿಬ್ಬಂದಿ ಚಿರತೆಯನ್ನು ಸುರಕ್ಷಿತವಾಗಿ ವಶಕ್ಕೆ ಪಡೆದಿದ್ದಾರೆ.

ಈ ಕಾರ್ಯಾಚರಣೆ ಗ್ರಾಮಸ್ಥರಲ್ಲಿ ಸ್ವಲ್ಪ ಮಟ್ಟಿನ ನಿರಾಳತೆ ತಂದರೂ, ಇನ್ನೂ ಈ ಪ್ರದೇಶದಲ್ಲಿ ಹಲವು ಚಿರತೆಗಳು ಸಂಚರಿಸುತ್ತಿವೆ ಎಂಬ ಶಂಕೆ ವ್ಯಕ್ತವಾಗಿದೆ. ಇನ್ನಷ್ಟು ಬೋನುಗಳನ್ನು ಅಳವಡಿಸಿ ಉಳಿದ ಚಿರತೆಗಳನ್ನೂ ಸೆರೆ ಹಿಡಿಯಬೇಕು. ಸೆರೆಸಿಕ್ಕಿರುವ ಚಿರತೆಯನ್ನು ತಕ್ಷಣವೇ ಬೇರೆ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸಬೇಕೆಂದು ಗ್ರಾಮಸ್ಥರು ಅರಣ್ಯ ಇಲಾಖೆಯನ್ನು ಒತ್ತಾಯಿಸಿದ್ದಾರೆ.

## ವ್ಯಕ್ತಿ ಮೇಲೆ ಯುವಕರ ಹಲ್ಲೆ

• ಪ್ರಜೋದಯ ವರದಿ

**ಸಕಲೇಶಪುರ:** ಕ್ಷುಲ್ಲಕ ಕಾರಣವನ್ನೇ ನೆಪವಾಗಿಸಿಕೊಂಡು ಯುವಕರ ಗುಂಪೊಂದು ಗ್ಯಾರೇಜ್ ಮಾಲೀಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ ಘಟನೆ ತಾಲ್ಲೂಕಿನ ಬಾಳ್ಳುಪೇಟೆ ಸಮೀಪ ನಡೆದಿದೆ.

ಬಾಳ್ಳುಪೇಟೆಯಲ್ಲಿರುವ ಮಾರುತಿ ಆಟೋ ವರ್ಕ್ಸ್ ಮಾಲೀಕ ತೇಜಸ್ ಅವರ ಮೇಲೆ ಆಲೂರು ತಾಲ್ಲೂಕಿನ ಪಾಳ್ಯ ಸಮೀಪದ ತಿಮ್ಮನಹಳ್ಳಿ ಗ್ರಾಮದ ಶ್ರೀಧರ್ ಹಾಗೂ ಆತನ ಸಹಚರರು ಬಿಯರ್ ಬಾಟಲಿ ಹಾಗೂ ಕಲ್ಲುಗಳಿಂದ ಮಾರಣಾಂತಿಕ ಹಲ್ಲೆ ನಡೆಸಿ, ಗ್ಯಾರೇಜ್ ಮುಂಭಾಗ ನಿಲ್ಲಿಸಿದ್ದ ಕಾರುಗಳಿಗೆ ಕಲ್ಲು ತೂರಿ ಭಾರೀ ಹಾನಿ ಮಾಡಿ ಪರಾರಿಯಾಗಿದ್ದಾರೆಂದು ಆರೋಪಿಸಲಾಗಿದೆ.

ಗಂಭೀರವಾಗಿ ಗಾಯಗೊಂಡ ತೇಜಸ್‌ನನ್ನು ಮೊದಲಿಗೆ ಸಕಲೇಶಪುರ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ, ಬಳಿಕ ಹೆಚ್ಚಿನ ಚಿಕಿತ್ಸೆಗೆ ಹಾಸನ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

ಘಟನೆಯ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಮುಂದುವರಿಸಿದ್ದು, ಒತ್ತಡಕ್ಕೆ ಒಳಗಾಗದೆ ನಿಷ್ಪಕ್ಷಪಾತ ತನಿಖೆ ನಡೆಸಿ ಆರೋಪಿಗಳನ್ನು ಶೀಘ್ರ ಬಂಧಿಸಬೇಕೆಂದು ತೇಜಸ್ ಮನವಿ ಮಾಡಿದ್ದಾರೆ.

## ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಭಿಮತ

# ವಿಶ್ವಾಸಾರ್ಹತೆ ಉಳಿಸಿಕೊಂಡರಷ್ಟೇ ಪತ್ರಕರ್ತರಿಗೆ ಗೌರವ

• ಪ್ರಜೋದಯ ವರದಿ

**ಬೇಲೂರು:** ಸಮಾಜದಲ್ಲಿ ಪತ್ರಕರ್ತರು ವಿಶ್ವಾಸಾರ್ಹತೆ ಉಳಿಸಿಕೊಂಡರೆ ಮಾತ್ರ ಗೌರವ ದೊರೆಯುತ್ತದೆ. ಸದೃಢ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಪತ್ರಕರ್ತರು ಶ್ರಮಿಸಬೇಕೆಂದು ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಹೇಳಿದರು.





ಪಟ್ಟಣದ ಆರ್ವಿ ಕಲ್ಯಾಣ ಮಂಟಪದಲ್ಲಿ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘ ಹಮ್ಮಿಕೊಂಡಿದ್ದ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗು ರಾಜ್ಯ ಮತ್ತು ಜಿಲ್ಲಾ ಪದಾಧಿಕಾರಿಗಳಿಗೆ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವ ಹಾಗು ಕರ್ನಾಟಕ ಏಕೀಕರಣದ ಸಂದರ್ಭದಲ್ಲಿ ಪತ್ರಿಕೆಗಳ ಮಹತ್ವದ ಪಾತ್ರದಿಂದಲೇ ಜನರಲ್ಲಿ ಇಂದಿಗೂ ಪತ್ರಿಕಾರಂಗದ ಮೇಲೆ ವಿಶ್ವಾಸವಿದೆ. ಆದರೆ, ಕೆಲ ಪತ್ರಕರ್ತರು ತಮ್ಮ ಮೌಲ್ಯಗಳನ್ನು ಮರೆತು ಸುಳ್ಳು ಸುದ್ದಿಗಳು ಹಾಗು ಶರವೇಗದ ಸುದ್ದಿಗಳ ಮೂಲಕ ಪತ್ರಿಕೋದ್ಯಮಕ್ಕೆ ಕೆಟ್ಟ ಹೆಸರು ತರುತ್ತಿರುವುದು ಶೋಚನೀಯ. ಬ್ರೇಕಿಂಗ್ ನ್ಯೂಸ್ ಹಾವಳಿ ಸಮಾಜ ಮತ್ತು ಕುಟುಂಬಗಳಲ್ಲಿ ಬಿರುಕು ಮೂಡಿಸುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ ಬೇಲೂರು ಪತ್ರಕರ್ತರ ಸಂಘಕ್ಕೆ ವಿಶೇಷ ಸ್ಥಾನವಿದ್ದು, ಇಂತಹ ಬೃಹತ್ ಹಾಗು ಅರ್ಥಪೂರ್ಣ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಇಡೀ ಜಿಲ್ಲೆಗೆ ಮಾದರಿಯಾಗಿದ್ದಾರೆ. ನೂತನ ಅಧ್ಯಕ್ಷ ಶಿವರಾಜ್ ತಂಡ ಸಂಘಟನೆ ದೃಷ್ಟಿಯಿಂದ ಉತ್ತಮ ಕಾರ್ಯ ನಿರ್ವಹಿಸುವ ಜೊತೆಗೆ ಸಮಾಜ ಮುಖಿ ಸೇವೆಗಳಿಗೆ ಒತ್ತು ನೀಡಬೇಕು. ಜೊತೆಗೆ ನಕಲಿ ಪತ್ರಕರ್ತರ ಹಾವಳಿಗೆ ಕಡಿವಾಣ ಹಾಕುವ ಕೆಲಸವೂ ಈ ತಂಡದಿಂದ ಆಗಬೇಕೆಂದು ತಿಳಿಸಿದರು.

ಶಾಸಕ ಹೆಚ್.ಕೆ.ಸುರೇಶ್ ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಪತ್ರಿಕಾರಂಗದ ಪಾತ್ರ ಅತ್ಯಂತ ಮಹತ್ವಪೂರ್ಣವಾಗಿದೆ. ತಪ್ಪುಗಳನ್ನು ನೇರವಾಗಿ ಪ್ರಶ್ನಿಸುವ ಮೂಲಕವೇ ಪತ್ರಿಕಾರಂಗ ಜನರ ವಿಶ್ವಾಸಕ್ಕೆ ಪಾತ್ರವಾಗಿದೆ. ಈಗಾಗಲೇ ಬೇಲೂರು ಪತ್ರಕರ್ತರ ಸಂಘವು ಸುಸಜ್ಜಿತ ಕಟ್ಟಡ ಹೊಂದಿದ್ದು, ಛಾವಣಿಯಲ್ಲಿ ಸಭಾ ಭವನ ನಿರ್ಮಾಣಕ್ಕೆ ಸಹಕಾರ ನೀಡುವುದಾಗಿ ಹಾಗು ಪತ್ರಕರ್ತರ ಕ್ಷೇಮಾಭಿವೃದ್ಧಿ ನಿಧಿಗೆ 5 ಲ.ರೂ. ನೀಡುವುದಾಗಿ ಭರವಸೆ ನೀಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಅವರು ಮಾತನಾಡಿ, ಡಿಜಿವಿ ಸ್ಥಾಪಿಸಿದ ಪತ್ರಕರ್ತರ ಸಂಘವು ಇದೀಗ 94 ವರ್ಷಗಳನ್ನು ಪೂರೈಸಿ ರಾಜ್ಯದ ಬಹುದೊಡ್ಡ ಸಂಘಟನೆಯಾಗಿರುವ ಹೆಗ್ಗಳಿಕೆಗೆ ಪಾತ್ರವಾಗಿದೆ. ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದಲ್ಲಿ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್, ಕೋವಿಡ್ ಸಂದರ್ಭದಲ್ಲಿ ಪರಿಹಾರ, ನಿವೃತ್ತರಿಗೆ ಮಾಸಾಶನ ಸೇರಿ ಅನೇಕ ಕಲ್ಯಾಣ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ. ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಪ್ರಭಾಕರ್ ಅವರ ಕಾರ್ಯಕ್ಷಮತೆ ನಿಜಕ್ಕೂ ಅನನ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆಪಿಎಸ್ ಪ್ರಮೋದ್, ತಾಲ್ಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಬಿ.ಶಿವರಾಜ್ ಮಾತನಾಡಿದರು. ಉಪಾಧ್ಯಕ್ಷರಾದ ನಂಜುಂಡೇಗೌಡ, ಜಿ. ಪ್ರಕಾಶ್, ಪುರಸಭಾ ಅಧ್ಯಕ್ಷೆ ಉಷಾ ಸತೀಶ್, ಹೆಚ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಎಂ.ಎ. ನಾಗರಾಜ್, ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ರವಿ ನಾಕಲಗೂಡು, ಬಾಳ್ಳು ಗೋಪಾಲ್, ನಿಕಟಪೂರ್ವ ಅಧ್ಯಕ್ಷ ರಘು ನಾಥ್, ಸಿಪಿಐ ರೇವಣ್ಣ, ಪ್ರಧಾನ ಕಾರ್ಯ ದರ್ಶಿ ಬಿ.ಎಲ್. ಲಕ್ಷ್ಮಣ್, ಉಪಾಧ್ಯಕ್ಷ ಆರ್. ವೆಂಕಟೇಶ್, ಖಜಾಂಚಿ ಲೋಹಿತ್, ಕಾರ್ಯ ದರ್ಶಿಗಳಾದ ಬಿ.ಎನ್.ಗಣೇಶ್ ಮತ್ತಿತರರಿದ್ದರು.

CMYK CMYK CMYK CMYK

# ಒಪಿಎಸ್ ಜಾರಿಗೊಳಿಸದಿದ್ದರೆ ಕರ್ನಾಟಕ ಬಂದ್

## ಎನ್‌ಪಿಎಸ್ ನೌಕರರ ಸಂಘದ 2ನೇ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಸಿ.ಎಸ್.ಷಡಾಕ್ಷರಿ ಎಚ್ಚರಿಕೆ

• ಪ್ರಜೋದಯ ವರದಿ

**ದಾವಣಗೆರೆ:** ರಾಷ್ಟ್ರೀಯ ಪಿಂಚಣಿ ಯೋಜನೆ (ಎನ್‌ಪಿಎಸ್) ರದ್ದುಗೊಳಿಸಿ ಹಳೆ ಪಿಂಚಣಿ ಯೋಜನೆ (ಒಪಿಎಸ್) ಮರು ಜಾರಿಗೊಳಿಸುವ ಬಗ್ಗೆ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳದಿದ್ದರೆ, ಅನಿವಾರ್ಯವಾಗಿ ರಾಜ್ಯವನ್ನು ಬಂದ್ ಮಾಡುವ ಮೂಲಕ ಹೋರಾಟ ನಡೆಸಲಾಗುವುದೆಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ ಅವರು ಎಚ್ಚರಿಕೆ ನೀಡಿದರು.

ನಗರದ ಕುವೆಂಪು ಕನ್ನಡ ಭವನದಲ್ಲಿ ಭಾನುವಾರ ನಡೆದ ಅಖಿಲ ಕರ್ನಾಟಕ ಎನ್‌ಪಿಎಸ್ ನೌಕರರ ಸಂಘದ 2ನೇ ರಾಜ್ಯ ಕಾರ್ಯಕಾರಿಣಿ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ಹೋರಾಟದ ಕಾರಣಕ್ಕೆ ನನ್ನ ಅಮಾನತು ಮಾಡಿದರೂ, ಬಂಧಿಸಿದರೂ ಹೆದರುವುದಿಲ್ಲ. ದೇವರು ಬದುಕು ನೀಡಿದ್ದಾನೆ. ಸಾಮರ್ಥ್ಯದ ಮೇಲೆ ಸರ್ಕಾರಿ ಉದ್ಯೋಗ ದೊರೆತಿದೆ. ನನ್ನ ಜೀವ ತೆಗೆಯುವ, ಸರ್ಕಾರಿ ಉದ್ಯೋಗ ಕಸಿಯುವ ಅಧಿಕಾರ ಯಾರಿಗೂ ಇಲ್ಲ. ಯಾರ ಬೆದರಿಕೆಗಳಿಗೂ ಬಗ್ಗುವುದಿಲ್ಲ ಎಂದು ಹೇಳಿದರು.

ನಮ್ಮ ಹೋರಾಟ ಪ್ರವಾಹದ ರೀತಿ ಇರಬೇಕು. ಯಾರಾದರೂ ಅಧಿಕಾರಿ ಕಚೇರಿಯೊಳಗೆ ಹೋಗಿ ಕುಳಿತರೆ ಕೊರಳಪಟ್ಟಿ ಹಿಡಿದು ಹೊರ ದಬ್ಬಬೇಕು, ಈ ವಿಷಯದಲ್ಲಿ ಮುಲಾಜಿಲ್ಲ. ಅದರಲ್ಲಿ ನಮ್ಮ ಬದುಕಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ರಾಜಸ್ಥಾನ, ಛತ್ತೀಸಗಡ, ಹಿಮಾಚಲ ಪ್ರದೇಶ, ಪಂಜಾಬ್, ಜಾರ್ಖಂಡ್ ರಾಜ್ಯಗಳಲ್ಲಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲಾಗಿದೆ. ತೆಲಂಗಾಣ ಮತ್ತು ಆಂಧ್ರಪ್ರದೇಶಗಳಲ್ಲಿ ಗ್ಯಾರಂಟಿ ಪೆನ್ಷನ್ ಸ್ಕೀಮ್ ಜಾರಿಗೊಳಿಸಲಾಗಿದೆ. ನಮ್ಮಲ್ಲೂ ಒಪಿಎಸ್ ಜಾರಿಯಾಗಲೇಬೇಕೆಂದು ಹೇಳಿದರು.

ಎಕೆಎನ್‌ಪಿಎಸ್ ರಾಜ್ಯ ಘಟಕದ ಅಧ್ಯಕ್ಷ ನಾಗನಗೌಡ ಎಂ.ಎ., ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಶಿವಣ್ಣ, ನೌಕರರ ಸಂಘದ ಉಪಾಧ್ಯಕ್ಷ ವೀರೇಶ್ ಎಸ್.ಒಡೇನಪುರ, ತಮಿಳುನಾಡಿನ ಎನ್‌ಪಿಎಸ್‌ನ ಸಂಚಾಲಕರಾದ ಫೆಡ್ರಿಕ್, ಸೆಲ್ವಿಕುಮಾರ್ ಭಾಗವಹಿಸಿದ್ದರು.

### ಸಭೆಯಲ್ಲಿ ಕೈಗೊಂಡ ನಿರ್ಣಯಗಳು

- ಅಖಿಲ ಕರ್ನಾಟಕ ಎನ್‌ಪಿಎಸ್ ಸಂಘ ಒಪಿಎಸ್ ಮರು ಜಾರಿ ಕುರಿತು ಮುಂದಿನ ಹೋರಾಟವನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದೊಂದಿಗೆ ನಡೆಸುವುದು.
- ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸಹಯೋಗದೊಂದಿಗೆ ಜಿಲ್ಲೆ ಮತ್ತು ತಾಲ್ಲೂಕು ಹಂತದಲ್ಲಿ ಸಂಘಟನೆಯನ್ನು ಬಲಪಡಿಸುವುದು. ಸರ್ಕಾರಿ ನೌಕರರ ಸಂಘದ ನೇತೃತ್ವದಲ್ಲಿ ಎನ್‌ಪಿಎಸ್ ಅಧ್ಯಯನ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಲು ಒತ್ತಾಯಿಸುವುದು.
- ಸರ್ಕಾರಿ ನೌಕರರ ಸಂಘ ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸುವ ಎನ್‌ಪಿಎಸ್ ನೌಕರರ ಸಮ್ಮೇಳನದಲ್ಲಿ ರಾಜ್ಯದ ಎಲ್ಲಾ ಎನ್‌ಪಿಎಸ್ ನೌಕರರು ಭಾಗವಹಿಸುವುದು.
- ಒಪಿಎಸ್ ಮರುಜಾರಿಗೊಳಿಸುವ ವಿಚಾರದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ಣಯಕ್ಕೆ ಬೆಂಬಲ ನೀಡುವುದು.
- ರಾಜ್ಯಾದ್ಯಂತ ಸರ್ಕಾರಿ ನೌಕರರ ಸಂಘದ ಭಾಗವಾಗಿ ಅಖಿಲ ಕರ್ನಾಟಕ ಎನ್‌ಪಿಎಸ್ ನೌಕರರ ಸಂಘಟನೆಯನ್ನು ಬಲಪಡಿಸುವುದು.
- ಸಂಘದ ಮುಂದಿನ ರಾಜ್ಯ ಕಾರ್ಯಕಾರಿಣಿ ಸಭೆಯನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಬೆಟ್ಟದಲ್ಲಿ ನಡೆಸುವುದು.

# ಕಾಂಗ್ರೆಸ್ ಅಸ್ಸಾಂ ಭೂಮಿಯನ್ನು ನುಸುಳುಕೋರರಿಗೆ ಬಿಟ್ಟುಕೊಟ್ಟಿದೆ

• ಪ್ರಜೋದಯ ವರದಿ

**ಕಲಿಯಾಬೋರ್:** ಈಶಾನ್ಯ ರಾಜ್ಯಗಳಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ವೋಟ್‌ಗಾಗಿ ಅಸ್ಸಾಂನ ಭೂಮಿಯನ್ನು ನುಸುಳುಕೋರರಿಗೆ ಬಿಟ್ಟುಕೊಟ್ಟಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



ಅಸ್ಸಾಂನಲ್ಲಿ ಚುನಾವಣೆ ಇರುವುದರಿಂದ ಕಲಿಯಾಬೋರ್‌ನಲ್ಲಿ ರ್‍ಯಾಲಿ ನಡೆಸಿದ ಮೋದಿಯವರು, ಜನರನ್ನು ಉದ್ದೇಶಿಸಿ ಮಾತನಾಡಿದರು. ಅಸ್ಸಾಂನಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ, ಗಡಿಯೊಳಗೆ ಅಕ್ರಮ ನುಸುಳುಕೋರರ ಸಂಖ್ಯೆ ಹೆಚ್ಚುತ್ತಿತ್ತು. ಅವರು ಅರಣ್ಯ ಪ್ರದೇಶ ಹಾಗೂ ಸಾಂಪ್ರದಾಯಿಕ ಸಂಸ್ಥೆಗಳನ್ನು ಅತಿಕ್ರಮಿಸಿದ್ದಾರೆ ಎಂದರು.

ಅಸ್ಸಾಂನ ಭೂಮಿಯನ್ನು ಅತಿಕ್ರಮಿಸಿದ ನುಸುಳುಕೋರರನ್ನು ಹೊರಹಾಕುವ ಮೂಲಕ ಬಿಜೆಪಿ ಸರ್ಕಾರ ಇಲ್ಲಿನ ಗುರುತು ಮತ್ತು ಸಂಸ್ಕೃತಿಯನ್ನು ರಕ್ಷಿಸುತ್ತಿದೆ ಎಂದು ಹೇಳಿದರು.

ನುಸುಳುಕೋರರು ಜನಸಂಖ್ಯಾ ಸಮತೋಲನವನ್ನು ಹಾಳು ಮಾಡುತ್ತಿದ್ದಾರೆ. ಸಂಸ್ಕೃತಿಯ ಮೇಲೆ ದಾಳಿ ಮಾಡುತ್ತಿದ್ದಾರೆ. ಬಡವರು ಮತ್ತು ಯುವಕರಿಂದ ಉದ್ಯೋಗಗಳನ್ನು ಕಸಿದು ಕೊಳ್ಳುತ್ತಿದ್ದಾರೆ. ಮಾತ್ರವಲ್ಲ, ಬುಡಕಟ್ಟು ಪ್ರದೇಶಗಳಲ್ಲಿ ಭೂಮಿಯನ್ನು ಮೋಸದಿಂದ ಆಕ್ರಮಿಸಿಕೊಳ್ಳುತ್ತಿದ್ದಾರೆ. ಇದು ಅಸ್ಸಾಂ ಮತ್ತು ರಾಷ್ಟ್ರದ ಭದ್ರತೆ ಎರಡಕ್ಕೂ ಗಂಭೀರ ಅಪಾಯವನ್ನುಂಟುಮಾಡುತ್ತಿದೆ ಎಂದು ಹೇಳಿದರು.

ಒಳನುಸುಳುಕೋರರ ರಕ್ಷಣೆ ಮತ್ತು ಅಧಿಕಾರ ಪಡೆಯುವುದನ್ನೇ ತನ್ನ ನೀತಿಯನ್ನಾಗಿಸಿ ಕೊಂಡಿರುವ ಕಾಂಗ್ರೆಸ್ ಕುರಿತು ಜನರು ಜಾಗರೂಕರಾಗಿರಬೇಕು ಎಂದು ಎಚ್ಚರಿಸಿದರು.

ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ದೇಶದಾದ್ಯಂತ ಇದೇ ನೀತಿಯನ್ನು ಅನುಸರಿಸುತ್ತಿವೆ. ಬಿಹಾರ ಚುನಾವಣೆ ಸಂದರ್ಭದಲ್ಲಿ ಒಳನುಸುಳುಕೋರರನ್ನು ರಕ್ಷಿಸಲು ರ್‍ಯಾಲಿಗಳನ್ನು ಆಯೋಜಿಸಿದ್ದರು. ಅಲ್ಲಿನ ಜನರು ಅವರನ್ನು ಸಂಪೂರ್ಣವಾಗಿ ತಿರಸ್ಕರಿಸಿದರು. ಅಸ್ಸಾಂನ ಜನರು ಕೂಡ ಅವರಿಗೆ ಸರಿಯಾದ ತಿರುಗೇಟು ನೀಡುತ್ತಾರೆಂಬ ವಿಶ್ವಾಸವಿದೆ ಎಂದರು.

ಋಣಾತ್ಮಕ ರಾಜಕೀಯದ ಸಂದೇಶ ನೀಡುವ ಮೂಲಕ ಕಾಂಗ್ರೆಸ್, ಜನರ ನಂಬಿಕೆ ಕಳೆದುಕೊಂಡಿದೆ. ಹಾಗಾಗಿ ಬಿಜೆಪಿಯು ದೇಶದ ಜನರ ಮೊದಲ ಆಯ್ಕೆಯಾಗಿದೆ ಎಂದು ಪ್ರಧಾನಿ ಹೇಳಿದರು.

# ಇಂಡಿಯಾ ಓಪನ್ ಬ್ಯಾಡ್ಮಿಂಟನ್: ಲಿನ್‌ಗೆ ಕಿರೀಟ

• ಪ್ರಜೋದಯ ವರದಿ

**ನವದೆಹಲಿ:** ತೈವಾನ್‌ನ ಭರವಸೆಯ ಆಟಗಾರ ಲಿನ್ ಚುನ್-ಯಿ ಅವರು ಭಾನುವಾರ ಮುಕ್ತಾಯಗೊಂಡ ಇಂಡಿಯಾ ಓಪನ್ ಸೂಪರ್ 750 ಬ್ಯಾಡ್ಮಿಂಟನ್ ಟೂರ್ನಿಯ ಸಿಂಗಲ್ ಕಿರೀಟ ಗೆದ್ದುಕೊಂಡರು. ವಿಶ್ವದ ಅಗ್ರಮಾನ್ಯ ಆಟಗಾರ್ತಿ, ದಕ್ಷಿಣ ಕೊರಿಯಾದ ಆನ್ ಸೆ-ಯಂಗ್ ಅವರು ಮಹಿಳೆಯರ ವಿಭಾಗದ ಪ್ರಶಸ್ತಿಯನ್ನು ಉಳಿಸಿ ಕೊಂಡರು.



ವಿಶ್ವ ಕ್ರಮಾಂಕದಲ್ಲಿ 12ನೇ ಸ್ಥಾನದಲ್ಲಿರುವ ಲಿನ್ ಅವರು ಫೈನಲ್‌ನಲ್ಲಿ 21-10, 21-18ರಿಂದ ನೇರ ಗೇಮ್‌ಗಳಲ್ಲಿ ಮೂರನೇ ಶ್ರೇಯಾಂಕದ ಆಟಗಾರ ಜೊನಾಥನ್ ಕ್ರಿಸ್ಟೀ ಅವರನ್ನು ಮಣಿಸಿದರು. ಅದರೊಂದಿಗೆ, ಸೂಪರ್ 750 ಮಟ್ಟದ ಟೂರ್ನಿಯಲ್ಲಿ ಮೊದಲ ಬಾರಿ ಪ್ರಶಸ್ತಿ ಜಯಿಸಿದರು.

26 ವರ್ಷ ವಯಸ್ಸಿನ ಲಿನ್, ಕಳೆದ ವಾರ ಮುಕ್ತಾಯಗೊಂಡ ಮಲೇಷ್ಯಾ ಓಪನ್ ಸೂಪರ್ 1000 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಮೊದಲ ಸುತ್ತಿನಲ್ಲಿಯೇ ನಿರ್ಗಮಿಸಿದ್ದರು.

ಅಗ್ರಶ್ರೇಯಾಂಕ ಹೊಂದಿದ್ದ ಯಂಗ್ ಅವರು ಪ್ರಶಸ್ತಿ ಸುತ್ತಿನ ಹಣಾಹಣಿಯಲ್ಲಿ 21-13, 21- 11ರಿಂದ ಚೀನಾದ ವಾಂಗ್ ಜಿಯಿ ಅವರನ್ನು ಮಣಿಸಿದರು. ಆರಂಭದಿಂದಲೇ ಪಂದ್ಯದ ಮೇಲೆ ಹಿಡಿತ ಸಾಧಿಸಿದ ಯಂಗ್, ವಿಶ್ವ ಕ್ರಮಾಂಕದಲ್ಲಿ 2ನೇ ಸ್ಥಾನದಲ್ಲಿರುವ ವಾಂಗ್ ವಿರುದ್ಧ ಸಂಪೂರ್ಣ ಮೇಲುಗೈ ಸಾಧಿಸಿದರು. ಈ ಇಬ್ಬರು ಆಟಗಾರ್ತಿಯರು ಒಟ್ಟು 22 ಬಾರಿ ಮುಖಾಮುಖಿಯಾಗಿದ್ದು ಯಂಗ್ ಅವರಿಗೆ ಇದು 18ನೇ ಗೆಲುವು.

ಮಹಿಳೆಯರ ಡಬಲ್ಸ್‌ನಲ್ಲಿ ಅಗ್ರ ಶ್ರೇಯಾಂಕಿತ ಜೋಡಿ ಲಿಯು ಶೆಂಗ್ ಷು ಹಾಗೂ ತಾನ್ ನಿಂಗ್ ಅವರು ಚಾಂಪಿಯನ್ ಆಗಿ ಹೊರಹೊಮ್ಮಿದರು. ಚೀನಾದ ಈ ಜೋಡಿ ಫೈನಲ್‌ನಲ್ಲಿ 21-11, 21-18ರಿಂದ ಜಪಾನ್‌ನ ಯೂಕಿ ಫುಕುಶಿಮಾ ಹಾಗೂ ಸಯಾಕಾ ಮತ್ಸು ಮೊಟೊ ಅವರನ್ನು ಸೋಲಿಸಿತು.

ಮಿಶ್ರ ಡಬಲ್ಸ್‌ನಲ್ಲಿ ಥಾಯ್ಲೆಂಡ್‌ನ ದೆಚಾಪೊಲ್ ಪೂವರನುಕ್ರೊ ಸುಪಿಸಾರ ಪಾಸಂಪ್ರನ್ ಜೋಡಿಯು 19-21, 25-23, 21-18ರಿಂದ ಡೆನ್ಮಾರ್ಕ್‌ನ ಮತಿಯಾಸ್ ಕ್ರಿಸ್ಟಿಯಾನ್‌ಸೆನ್ ಹಾಗೂ ಅಲೆಕ್ಸಾಂಡ್ರಾ ಬೋಯೆ ಅವರನ್ನು ಸೋಲಿಸಿ ಪ್ರಶಸ್ತಿ ಎತ್ತಿಹಿಡಿಯಿತು.

# ಮಿಚೆಲ್, ಫಿಲಿಪ್ಸ್ ಶತಕ: ಭಾರತಕ್ಕೆ ಬೃಹತ್ ಗುರಿ

• ಪ್ರಜೋದಯ ವರದಿ

**ಇಂದೋರ್:** ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಏಕದಿನ ಸರಣಿಯ ಮೂರನೇ ಹಾಗೂ ನಿರ್ಣಾಯಕ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್, ಭಾರತದ ಗೆಲುವಿಗೆ 338 ರನ್‌ಗಳ ಬೃಹತ್ ಮೊತ್ತ ನೀಡಿತು.

ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಸೋತು ಬ್ಯಾಟಿಂಗ್ ಆರಂಭಿಸಿದ ನ್ಯೂಜಿಲೆಂಡ್ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ತಂಡದ ಮೊತ್ತ 6 ರನ್ ಆಗುವಷ್ಟರಲ್ಲಿ ಆರಂಭಿಕ ಬ್ಯಾಟರ್‌ಗಳು ಪೆವಿಲಿಯನ್ ಸೇರಿಕೊಂಡರು.

ಮೂರನೇ ವಿಕೆಟ್‌ಗೆ ಜೊತೆಯಾದ ವಿಲ್ ಯಂಗ್ ಹಾಗೂ ಡ್ಯಾರಿಲ್ ಮಿಚೆಲ್ 53 ರನ್‌ಗಳ ಜೊತೆಯಾಟ ಆಡುವ ಮೂಲಕ ತಂಡವನ್ನು ಆರಂಭಿಕ ಆಘಾತದಿಂದ ಪಾರು ಮಾಡಿದರು. ತಂಡದ ಮೊತ್ತ 58/3 ಆಗಿದ್ದಾಗ ಜೊತೆಯಾದ ಡ್ಯಾರಿಲ್ ಮಿಚೆಲ್ ಹಾಗೂ ಗ್ಲೆನ್ ಫಿಲಿಪ್ಸ್ ಭಾರತದ ಬೌಲರ್‌ಗಳ ಮೇಲೆ ಸವಾರಿ ಮಾಡಿದರು. ಈ ಜೋಡಿ 4ನೇ ವಿಕೆಟ್‌ಗೆ 219 ರನ್‌ಗಳ ಬೃಹತ್ ಜೊತೆಯಾಟ ಆಡಿದರು.

**ಮಿಚೆಲ್, ಫಿಲಿಪ್ಸ್ ಶತಕ**

ಸರಣಿಯುದ್ದಕ್ಕೂ ಅಮೋಘ ಬ್ಯಾಟಿಂಗ್ ಮಾಡಿದ ಮಿಚೆಲ್ ಅಂತಿಮ ಪಂದ್ಯದಲ್ಲೂ ಅಬ್ಬರಿಸಿದರು. ಅವರು 131 ಎಸೆತಗಳಲ್ಲಿ 15 ಬೌಂಡರಿ ಹಾಗೂ 3 ಸಿಕ್ಸರ್ ನೆರವಿನಿಂದ 137 ರನ್ ಸಿಡಿಸಿದರು. ಗ್ಲೆನ್ ಫಿಲಿಪ್ಸ್ ಕೂಡ ಕೇವಲ 88 ಎಸೆತಗಳಲ್ಲಿ 9 ಬೌಂಡರಿ ಹಾಗೂ 3 ಸಿಕ್ಸರ್ ನೆರವಿನಿಂದ 106 ರನ್ ಕಲೆಹಾಕಿದರು.

ಕೊನೆಯಲ್ಲಿ ನಾಯಕ ಮೈಕಲ್ ಬ್ರೇಸ್‌ವೆಲ್ ಸ್ಫೋಟಕ 28 ರನ್ ಗಳಿಸುವ ಮೂಲಕ ತಂಡದ ಮೊತ್ತವನ್ನು 337ಕ್ಕೆ ತಲುಪಿಸಿದರು.



ಭಾರತದ ಪರ ಅರ್ಷದೀಪ ಸಿಂಗ್ ಹಾಗೂ ಹರ್ಷಿತ್ ರಾಣ 3 ವಿಕೆಟ್ ಪಡೆದು ಕೊಂಡರು. ಮೊಹಮ್ಮದ್ ಸಿರಾಜ್ ಹಾಗೂ ಕುಲದೀಪ ಯಾದವ್ ತಲಾ ಒಂದೊಂದು ವಿಕೆಟ್ ಪಡೆದುಕೊಂಡರು.



### ಕಿವೀಸ್ ವಿರುದ್ಧ ಕೊಹ್ಲಿ ಅಬ್ಬರ



ಇಲ್ಲಿನ ಹೋಳ್ಕರ್ ಮೈದಾನದಲ್ಲಿ ನಡೆಯುತ್ತಿರುವ ಭಾರತ ಹಾಗೂ ನ್ಯೂಜಿಲೆಂಡ್ ತಂಡಗಳ ನಡುವಿನ ಮೂರನೇ ಹಾಗೂ ಸರಣಿ ನಿರ್ಧರಿಸುವ ಪಂದ್ಯದಲ್ಲಿ ಟೀಂ ಇಂಡಿಯಾದ ತಾರಾ ಬ್ಯಾಟರ್ ವಿರಾಟ್ ಕೊಹ್ಲಿ ಅವರು ಅಂತರರಾಷ್ಟ್ರೀಯ ಏಕದಿನ ಕ್ರಿಕೆಟ್‌ನಲ್ಲಿ ತಮ್ಮ 54ನೇ ಶತಕ ಸಿಡಿಸಿ ಮಿಂಚಿದ್ದಾರೆ.

338 ರನ್‌ಗಳ ಬೃಹತ್ ಗುರಿ ಬೆನ್ನಟ್ಟಿದ ಭಾರತ ತಂಡದ ಪರ ಬ್ಯಾಟರ್‌ಗಳು ಒಬ್ಬರ ಹಿಂದೆ ಒಬ್ಬರಂತೆ ಪೆವಿಲಿಯನ್ ಸೇರಿಕೊಂಡರು. ತಂಡ ಸಂಕಷ್ಟದಲ್ಲಿದ್ದಾಗ ಜವಾಬ್ದಾರಿಯುತ ಬ್ಯಾಟಿಂಗ್ ನಡೆಸಿದ ಕೊಹ್ಲಿ, ನ್ಯೂಜಿಲೆಂಡ್ ವಿರುದ್ಧ 7ನೇ ಶತಕ ಸಿಡಿಸಿದರು. ಆ ಮೂಲಕ ಕಿವೀಸ್ ವಿರುದ್ಧ ಅತೀ ಹೆಚ್ಚು ಶತಕ ಸಿಡಿಸಿದ ಬ್ಯಾಟರ್ ಎಂಬ ದಾಖಲೆ ಮಾಡಿದರು.

ನ್ಯೂಜಿಲೆಂಡ್ ವಿರುದ್ಧ ಅತೀ ಹೆಚ್ಚು ಶತಕ
ವಿರಾಟ್ ಕೊಹ್ಲಿ 7 ಶತಕ (36 ಇನಿಂಗ್ಸ್)
ರಿಕಿ ಪಾಂಟಿಂಗ್ 6 ಶತಕ (50 ಇನಿಂಗ್ಸ್)
ವೀರೇಂದ್ರ ಸೆಹ್ವಾಗ್ 6 ಶತಕ (23 ಇನಿಂಗ್ಸ್)
ಸಚಿನ್ ತೆಂಡೂಲ್ಕರ್ 5 ಶತಕ (41 ಇನಿಂಗ್ಸ್)
ಸನತ್ ಜಯಸೂರ್ಯ 5 ಶತಕ (45 ಇನಿಂಗ್ಸ್)

ಈ ಶತಕದ ಮೂಲಕ ವಿರಾಟ್ ಕೊಹ್ಲಿಯವರು ಟೆಸ್ಟ್, ಏಕದಿನ ಹಾಗೂ ಟಿ-20 ಅಂತರರಾಷ್ಟ್ರೀಯ ಕ್ರಿಕೆಟ್‌ನಿಂದ ತಮ್ಮ 85ನೇ ಶತಕ ಸಿಡಿಸಿದ ದಾಖಲೆ ಮಾಡಿದರು. ಏಕದಿನ ಕ್ರಿಕೆಟ್‌ನಲ್ಲಿ 54ನೇ ಶತಕ, ಭಾರತದಲ್ಲಿ ಇದು ಅವರ 41ನೇ ಶತಕವಾಗಿದೆ.

ಪಾಟಿಂಗ್ ಅತ್ಯಧಿಕ ರನ್ ದಾಖಲೆ ಮುರಿದ ಕೊಹ್ಲಿ

ವಿರಾಟ್ ಕೊಹ್ಲಿ ಇಂದಿನ ಪಂದ್ಯದಲ್ಲಿ ಶತಕ ಸಿಡಿಸುವ ಮೂಲಕ ಏಕದಿನ ಮಾದರಿಯ ಕ್ರಿಕೆಟ್‌ನಲ್ಲಿ ಮೂರನೇ ಕ್ರಮಾಂಕದಲ್ಲಿ 12,655 ರನ್ ಕಲೆಹಾಕಿದ್ದ ಆಸ್ಟ್ರೇಲಿಯಾ ಮಾಜಿ ನಾಯಕ ರಿಕಿ ಪಾಂಟಿಂಗ್ ದಾಖಲೆ ಮುರಿದಿದ್ದಾರೆ. ಇದರ ಜೊತೆಗೆ ಇಂದಿನ ಶತಕದ ಮೂಲಕ ವಿರಾಟ್ ಕೊಹ್ಲಿ ಅವರು ಏಕದಿನ ಕ್ರಿಕೆಟ್‌ನಲ್ಲಿ ರನ್ ಚೇಸ್ ಮಾಡುವಾಗ ಸಿಡಿಸಿದ 29 ಶತಕ ಇದಾಗಿದೆ. ಅಂತಿಮವಾಗಿ ವಿರಾಟ್ ಕೊಹ್ಲಿ ಅವರು 108 ಎಸೆತಗಳಲ್ಲಿ 10 ಬೌಂಡರಿ ಹಾಗೂ 3 ಸಿಕ್ಸರ್ ಸಹಿತ 124 ರನ್‌ಗಳಿಸಿ ಕ್ರಿಸ್ತಿಯನ್ ಕ್ಲಾರ್ಕ್ ಅವರಿಗೆ ವಿಕೆಟ್ ಒಪ್ಪಿಸಿ ಹೊರನಡೆದರು.

# 160 ಗ್ರಾಂ ಚಿನ್ನಾಭರಣ, ನಗದು ಕಳವು

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನಲ್ಲಿ ನಡೆದ ಮೂರು ಪ್ರತ್ಯೇಕ ಪ್ರಕರಣಗಳಲ್ಲಿ ಒಟ್ಟು 160 ಗ್ರಾಂ ಚಿನ್ನಾಭರಣ ಹಾಗು 1 ಲಕ್ಷ ರೂ. ನಗದು ಕಳವು ಮಾಡಲಾಗಿದೆ.

ತಾಲ್ಲೂಕಿನ ದೊಡ್ಡಬಾಗನಹಳ್ಳಿ ಗ್ರಾಮದ ಮಂಜುನಾಥ ಎಂಬುವ ವರ ಮನೆಗೆ ನುಗ್ಗಿದ ಕಳ್ಳರು 22 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ, 30 ಗ್ರಾಂ ತೂಕದ ಚಿನ್ನದ ತುಳಸಿಹಾರ ಒಟ್ಟು 52 ಗ್ರಾಂ ತೂಕವುಳ್ಳ ಚಿನ್ನಾ ಭರಣ ಕಳವು ಮಾಡಿದ್ದಾರೆ. ಈ ಸಂಬಂಧ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಾಲ್ಲೂಕಿನ ದೊಡ್ಡನಹಳ್ಳಿ ಗ್ರಾಮದ ದಿಲೀಪ್ ಕುಮಾರ್ ಅವರ ಮನೆಯವರು ದೇವಸ್ಥಾನಕ್ಕೆ ಹೋಗಿದ್ದ ವೇಳೆ ಒಳನುಗ್ಗಿದ ಕಳ್ಳರು ಬೀರುವಿನಲ್ಲಿ ಇಟ್ಟಿದ್ದ 40 ಗ್ರಾಂ ಚಿನ್ನದ ಲಾಂಗ್ ಚೈನ್, 18 ಗ್ರಾಂ 2 ಜೊತೆ ಚಿನ್ನದ ಓಲೆ, 16.5 ಗ್ರಾಂ ಒಂದು ಚೈನ್, 13 ಗ್ರಾಂನ ಒಟ್ಟು 6 ಉಂಗುರುಗಳು, 6 ಗ್ರಾಂ ಚಿನ್ನದ ಕರಿಮಣಿ ಗುಂಡುಗಳು, 4.5 ಗ್ರಾಂ ಚಿನ್ನದ ಓಲೆ ಟಿಪ್ಸ್ ಒಟ್ಟು ಸುಮಾರು 98 ಗ್ರಾಂ ಚಿನ್ನಾಭರಣ ಕಳವು ಮಾಡಿರುವ ಬಗ್ಗೆ ನಗರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಾಲ್ಲೂಕಿನ ಸಾಲಗಾಮೆಯ ರಮೇಶ್ ಎಂಬುವವರು ಬೆಂಗಳೂರಿನ ಮಗಳ ಮನೆಗೆ ತೆರಳಿದ್ದ ವೇಳೆ ಮನೆಯ ಬೀಗ ಮುರಿದು ಒಳನುಗ್ಗಿದ ಕಳ್ಳರು, ಬೀರುವಿನಲ್ಲಿ ಇಟ್ಟಿದ್ದ 1 ಲಕ್ಷ ರೂ. ನಗದು ಹಾಗು 10 ಗ್ರಾಂ ಚಿನ್ನದ ಒಡವೆಗಳನ್ನು ಕಳವು ಮಾಡಿರುವ ಬಗ್ಗೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹೆಚ್ಚುವರಿ ಸುಂಕಕ್ಕೆ ಐರೋಪ್ಯ ದೇಶಗಳ ಆಕ್ಷೇಪ


## ಟ್ರಂಪ್ ಕ್ರಮ ತಪ್ಪು ಎಂದ ಬ್ರಿಟನ್

• ಪ್ರಜೋದಯ ವರದಿ

**ಲಂಡನ್:** ಗ್ರೀನ್‌ಲ್ಯಾಂಡ್ ಸ್ವಾಧೀನ ವಿರೋಧಿಸುತ್ತಿರುವ ಯುರೋಪ್ ರಾಷ್ಟ್ರಗಳ ಮೇಲೆ ಹೆಚ್ಚುವರಿ ಸುಂಕ ವಿಧಿಸುವುದಾಗಿ ಅಮೇರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿರುವುದಕ್ಕೆ ಬ್ರಿಟನ್, ನೆದರ್ಲೆಂಡ್ಸ್, ಫ್ರಾನ್ಸ್, ಸ್ಪೇನ್, ಸ್ವೀಡನ್ ಆಕ್ಷೇಪ ವ್ಯಕ್ತಪಡಿಸಿವೆ.

ಟ್ರಂಪ್ ಅವರದ್ದು ಸಂಪೂರ್ಣ ತಪ್ಪು ನಿರ್ಧಾರ ಎಂದು ಈ ರಾಷ್ಟ್ರಗಳು ಹೇಳಿವೆ. ಟ್ರಂಪ್ ಅವರು ತಮ್ಮ ಸಾಮಾಜಿಕ ಮಾಧ್ಯಮ ಟ್ರೂತ್‌ನಲ್ಲಿ ಹೆಚ್ಚುವರಿ ಸುಂಕ ವಿಧಿಸುವ ಬಗ್ಗೆ ಪೋಸ್ಟ್ ಮಾಡಿದ ನಂತರ, ಯುರೋಪಿನ ಮಿತ್ರ ರಾಷ್ಟ್ರಗಳು ಈ ಕ್ರಮವನ್ನು ಖಂಡಿಸಿವೆ.

ಫೆಬ್ರುವರಿ 1ರಿಂದ ಬ್ರಿಟನ್, ಡೆನ್ಮಾರ್ಕ್, ನಾರ್ವೆ, ಸ್ವೀಡನ್, ಫ್ರಾನ್ಸ್, ಜರ್ಮನಿ, ನೆದರ್ಲೆಂಡ್ಸ್ ಮತ್ತು ಫಿನ್ಲೆಂಡ್‌ನಿಂದ ಅಮೇರಿಕಾಕ್ಕೆ ಆಮದು ಮಾಡಿಕೊಳ್ಳುವ ವಸ್ತುಗಳ ಮೇಲೆ ಶೇ.10ರಷ್ಟು ಸುಂಕ ವಿಧಿಸಲಾಗುವುದು. ಗ್ರೀನ್‌ಲ್ಯಾಂಡ್‌ನ ಖರೀದಿ ಒಪ್ಪಂದವಾಗುವವರೆಗೆ ಈ ಸುಂಕವು ಶೇ.25ರವರೆಗೆ ಏರಿಕೆಯಾಗಬಹುದು ಎಂದು ಟ್ರಂಪ್ ಹೇಳಿದ್ದಾರೆ.




ಗ್ರೀನ್‌ಲ್ಯಾಂಡ್ ಬಗ್ಗೆ ನಮ್ಮ ನಿಲುವು ತುಂಬಾ ಸ್ಪಷ್ಟವಾಗಿದೆ. ಇದು ಡೆನ್ಮಾರ್ಕ್ ಸಾಮ್ರಾಜ್ಯದ ಭಾಗವಾಗಿದೆ. ಅದರ ಭವಿಷ್ಯವು ಗ್ರೀನ್‌ಲ್ಯಾಂಡ್ ಮತ್ತು ಡೆನ್ಮಾರ್ಕ್‌ನವರಿಗೆ ಸಂಬಂಧಿಸಿದ ವಿಷಯವಾಗಿದೆ ಎಂದು ಬ್ರಿಟನ್ ಪ್ರಧಾನಿ ಕಿಯರ್ ಸ್ಟಾರ್ಮರ್ ತಿಳಿಸಿದ್ದಾರೆ.

ಆರ್ಕ್‌ಟಿಕ್ ಭದ್ರತೆಯು ನ್ಯಾಟೊಗೆ ಮುಖ್ಯವಾಗಿದೆ. ಮಿತ್ರ ರಾಷ್ಟ್ರಗಳು ಆರ್ಕ್‌ಟಿಕ್‌ನ ವಿವಿಧ ಭಾಗಗಳಲ್ಲಿ ರಷ್ಯಾದಿಂದ ಬರುವ ಬೆದರಿಕೆಗಳನ್ನು ಎದುರಿಸಲು ಒಟ್ಟಾಗಿ ಕೆಲಸ ಮಾಡಬೇಕು. ನ್ಯಾಟೊ ರಾಷ್ಟ್ರಗಳ ಸಾಮೂಹಿಕ ಭದ್ರತೆಗಾಗಿ ಶ್ರಮಿಸುತ್ತಿರುವ ಮಿತ್ರ ರಾಷ್ಟ್ರಗಳ ಮೇಲೆ ಸುಂಕಗಳನ್ನು ಹೇರುವುದು ಸರಿಯಲ್ಲ. ನಾವು ಈ ವಿಷಯವನ್ನು ನೇರವಾಗಿ ಅಮೇರಿಕಾ ಆಡಳಿತದೊಂದಿಗೆ ಚರ್ಚಿಸುತ್ತೇವೆಂದು ಹೇಳಿದ್ದಾರೆ.

ಪ್ರಾದೇಶಿಕ ಸಮಗ್ರತೆ ಮತ್ತು ಸಾರ್ವಭೌಮತ್ವವು ಅಂತರರಾಷ್ಟ್ರೀಯ ಕಾನೂನಿನ ಮೂಲ ಭೂತ ತತ್ವಗಳಾಗಿವೆ. ಸುಂಕ ಹೆಚ್ಚಳವು ಅಟ್ಲಾಂಟಿಕ್ ಆಚೆಯ ಸಂಬಂಧಗಳನ್ನು ಹಾಳು ಮಾಡುತ್ತದೆಂದು ಐರೋಪ್ಯ ಒಕ್ಕೂಟದ ಅಧ್ಯಕ್ಷೆ ಉರ್ಸುಲಾ ವಾನ್ ಡರ್ ಲೆಯೆನ್ ಅವರು ಎಕ್ಸ್‌ನಲ್ಲಿ ಎಚ್ಚರಿಕೆ ನೀಡಿದ್ದಾರೆ.

ದಾವೋಸ್‌ನಲ್ಲಿ ನಡೆಯಲಿರುವ ವಿಶ್ವ ಆರ್ಥಿಕ ವೇದಿಕೆಯ ಸಭೆಯಲ್ಲಿ ಟ್ರಂಪ್ ಅವರು ವಾನ್ ಡರ್ ಲೆಯೆನ್ ಮತ್ತು ಯುರೋಪ್‌ನ ಇತರ ನಾಯಕರನ್ನು ಭೇಟಿಯಾಗಲಿದ್ದಾರೆ. ಅಲ್ಲಿ ಗ್ರೀನ್‌ಲ್ಯಾಂಡ್ ಕುರಿತ ವಿಚಾರ ಪ್ರಮುಖವಾಗಿ ಚರ್ಚೆಯಾಗಲಿದೆ.

# ಪಡಿತರ ವಿತರಣೆಗೆ ಲಂಚ ಆರೋಪ ಸುಳ್ಳು

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯಲ್ಲಿ ನ್ಯಾಯಬೆಲೆ ಅಂಗಡಿ ಪಡಿತರ ವಿತರಕರು ಹಾಗು ಇಲಾಖೆ ಅಧಿಕಾರಿಗಳು ಲಂಚಾ ಪಡೆಯುತ್ತಿದ್ದಾರೆಂಬ ಆರೋಪ ಸತ್ಯಕ್ಕೆ ದೂರವಾಗಿದೆ ಎಂದು ಜಿಲ್ಲಾ ಸರ್ಕಾರಿ ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘದ ಅಧ್ಯಕ್ಷ ಚನ್ನಕೇಶವ ಅವರು ಸ್ಪಷ್ಟಪಡಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷರೆಂದು ಹೇಳಿ ಕೊಂಡು ಕೆಲವರು ಸುದ್ದಿಗೋಷ್ಠಿ ನಡೆಸಿ ಜಿಲ್ಲಾ ಆಹಾರ ಇಲಾಖೆ ಅಧಿಕಾರಿಗಳ ವಿರುದ್ಧ ಇಲ್ಲ ಸಲ್ಲದ ಆರೋಪ ಮಾಡಿದ್ದಾರೆ. ಅವರ ಆರೋಪದಲ್ಲಿ ಯಾವುದೇ ಹುರುಳಿಲ್ಲ, ನಾವು ನ್ಯಾಯ ಸಮ್ಮತವಾಗಿ ಪಡಿತರ ವಿತರಣೆ ಮಾಡುತ್ತಿದ್ದೇವೆಂದು ಹೇಳಿದರು.

ಜಿಲ್ಲೆಯಲ್ಲಿ 860 ಸರ್ಕಾರಿ ನ್ಯಾಯಬೆಲೆ ಅಂಗಡಿಗಳಿವೆ. ಇದುವರೆಗೂ ಯಾವೊಬ್ಬ ಅಂಗಡಿ ಮಾಲೀಕರು ಕೂಡ ಆಹಾರ ಇಲಾಖೆ ಅಧಿಕಾರಿಗಳು ಲಂಚ ಪಡೆದಿದ್ದಾರೆಂದು ಇದು ವರೆಗೂ ಆರೋಪಿಸಿಲ್ಲ. ಇತ್ತೀಚೆಗೆ ನಮ್ಮ ಜಿಲ್ಲೆಯವರೇ ಅಲ್ಲದ ವ್ಯಕ್ತಿಯೊಬ್ಬರು ಇಂತಹ ಆರೋಪ ಮಾಡಿರುವುದು ಸರಿಯಲ್ಲ. ನ್ಯಾಯಬೆಲೆ ಅಂಗಡಿಗಳಲ್ಲಿ ಅಳತೆ ಸರಿ ಇಲ್ಲದಿದ್ದರೆ ಅಥವಾ ತೂಕದಲ್ಲಿ ಮೋಸ ಮಾಡಿದರೆ ಕ್ರಮ ಕೈಗೊಳ್ಳಲಿ, ತಪ್ಪು ಮಾಡಿದವರಿಗೆ ಶಿಕ್ಷೆಯಾಗಲಿ, ತಪ್ಪು ಮಾಡಿದವರನ್ನು ಸಂಘ ಎಂದಿಗೂ ರಕ್ಷಿಸುವುದಿಲ್ಲ. ಸುಮ್ಮನೇ ಅಧಿಕಾರಿಗಳ ವಿರುದ್ಧ ಲಂಚ ಆರೋಪ ಹೊರಿಸುವುದು ಸರಿಯಲ್ಲ ಎಂದರು.



ಹಣ ಪಡೆದ ಅಧಿಕಾರಿಗಳ ವಿರುದ್ಧ ಕ್ರಮ ಆಗಲಿ, ಗ್ಯಾರಂಟಿ ಸಮಿತಿ ಸದಸ್ಯರಿಗೆ ಸೂಕ್ತ ಪುರಾವೆ ಇದ್ದರೆ ದೂರು ಕೊಡಬಹುದು. ಅಳತೆಯಲ್ಲಿ ಮೋಸ ಮಾಡಿದ ಆರೋಪದಡಿ ಈಗಾಗಲೇ ಸಾವಂತನಹಳ್ಳಿ ನ್ಯಾಯಬೆಲೆ ಅಂಗಡಿಯನ್ನು ಅಮಾನತು ಮಾಡಲಾಗಿದೆ ಎಂದು ತಿಳಿಸಿದರು.

ಪಡಿತರ ವಿತರಕರ ಸಂಘದ ನಾಗರಾಜ್, ಮಂಜೇಗೌಡ, ರವಿ, ಸಿದ್ದೇಶ್ ಕೆಲವತ್ತಿ, ಜೈಕುಮಾರ್ ಉಡುವಾರೆ ಇದ್ದರು.

# ವಿದ್ಯಾರ್ಥಿಗಳ ಸಾಧನೆಯಿಂದ ಶಾಲೆ-ಪಾಲಕರಿಗೆ ಕೀರ್ತಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಹಾಸನ ರಾಯಲ್ ಅಪೋಲೊ ಸ್ಕೂಲ್‌ನಲ್ಲಿ ಮೂಡುಬಿದಿರೆ ಎಕ್ಸಲೆಂಟ್ ವಿದ್ಯಾ ಸಂಸ್ಥೆ ವತಿಯಿಂದ ಇತ್ತೀಚೆಗೆ ನಡೆದ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದ ಪಟ್ಟಣದ ಜ್ಞಾನಸಾಗರ ಶಾಲೆಯ ವಿದ್ಯಾರ್ಥಿ ರೋಹನ್ ಅವರಿಗೆ ಸಂಸ್ಥೆ ವತಿಯಿಂದ ಅಭಿನಂದಿಸಲಾಯಿತು.

ನಂತರ ಸಂಸ್ಥೆಯ ಅಧ್ಯಕ್ಷ ಡಾ.ಕೆ. ನಾಗೇಶ್ ಅವರು ಮಾತನಾಡಿ, ವಿದ್ಯಾರ್ಥಿಗಳು ಸಾಧನೆ ಮಾಡಿದರೆ ಓದುತ್ತಿರುವ ಶಾಲೆಗಷ್ಟೇ ಅಲ್ಲದೆ ಹುಟ್ಟಿದ ಊರಿಗೂ ಹಾಗೂ ಹೆತ್ತವರಿಗೂ ಕೀರ್ತಿ ಸಿಗಲಿದೆ ಎಂದರು.

ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದು ಅತಿ ಮುಖ್ಯ. ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಉತ್ತಮ ವೇದಿಕೆ ಕಲ್ಪಿಸುವುದು ಶಾಲೆ ಹಾಗೂ ಶಿಕ್ಷಕರ ಜವಾಬ್ದಾರಿಯುತ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಸ್ಪರ್ಧೆ ಯಾವುದೇ ಇರಲಿ ಸೋಲು-ಗೆಲುವು ಇದ್ದೇ ಇರುತ್ತದೆ. ಸೋಲು ಹಾಗೂ ಗೆಲುವು ಎಂಬುದು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಗೆಲುವಿನಿಂದ ಬಹುಮಾನ ಸಿಕ್ಕರೆ ಸೋಲು ನೂರಾರು ಅನುಭವಗಳನ್ನು ಕಲಿಸುತ್ತದೆ. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡಾ ಮನೋಭಾವವನ್ನು ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು.



ಯಾವುದೇ ಒಂದು ಶಿಕ್ಷಣ ಸಂಸ್ಥೆಯು ಕೇವಲ ಗಳಿಕೆಗಾಗಿ ಶಾಲೆ ಪ್ರಾರಂಭಿಸುವುದಿಲ್ಲ. ಬದಲಿಗೆ ಮಕ್ಕಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಶಿಕ್ಷಣ ಕಲ್ಪಿಸುವುದರ ಜೊತೆಗೆ ಕ್ರೀಡೆ, ಸಾಹಿತ್ಯ, ವಿಜ್ಞಾನ ಸೇರಿ ವಿವಿಧ ಕ್ಷೇತ್ರಗಳಿಗೆ ಪರಿಚಯಿಸುತ್ತಾ ವಿದ್ಯಾರ್ಥಿಗಳ ಬದುಕಿಗೆ ದಾರಿ ದೀಪವಾಗಲಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆಯುವ ಮೂಲಕ 5 ಸಾವಿರ ರೂ. ನಗದು, ಟ್ರೋಫಿ ಹಾಗೂ ಪ್ರಶಸ್ತಿ ಪತ್ರ ಪಡೆದು ಶಾಲೆಗೆ ಒಳ್ಳೆಯ ಹೆಸರು ಹಾಗೂ ಕೀರ್ತಿ ತಂದಿರುವ ವಿದ್ಯಾರ್ಥಿ ರೋಹನ್ ಅವರ ಸಾಧನೆ ಹಾಗೂ ಪರಿಶ್ರಮವು ಮುಂದಿನ ಭವಿಷ್ಯಕ್ಕೆ ಮೆಟ್ಟಿಲುಆಗಲಿದೆಂದು ಶ್ಲಾಘಿಸಿದರು.

ಸಂಸ್ಥೆಯ ಕಾರ್ಯನಿರ್ವಹಣಾಧಿಕಾರಿ ಡಾ.ಭಾರತಿ ನಾಗೇಶ್, ಡೀನ್ ಡಾ.ಸುಜಾ ಫಿಲಿಪ್, ಆಡಳಿತಾಧಿಕಾರಿ ಫಿಲಿಪ್.ಸಿ.ಪಿ ಹಾಗೂ ಶಿಕ್ಷಕ ವೃಂದ ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಪರೀಕ್ಷಾ ಸಿದ್ಧತಾ ಶಿಬಿರ



• ಪ್ರಜೋದಯ ವರದಿ

**ಹಾಸನ:** ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಮುಂಬರುವ ವಾರ್ಷಿಕ ಪರೀಕ್ಷೆ ಎದುರಿಸುವ ಕುರಿತು ಪರೀಕ್ಷಾ ಸಿದ್ಧತೆ ಮತ್ತು ಆತ್ಮವಿಶ್ವಾಸ ಹೆಚ್ಚಿಸಲು ಜ.20ರಂದು ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್, ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಅಧ್ಯಕ್ಷ ಗಂಗಾಧರ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಶಿಬಿರ ಉದ್ಘಾಟಿಸುವರು. ಶಿಬಿರದಲ್ಲಿ ನಗರದಲ್ಲಿ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಭಾಗವಹಿಸುವರು. ಶಿಕ್ಷಣ ತಜ್ಞ ಎ.ಹೆಚ್.ಸಾಗರ್ ಅವರು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವರೆಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ರೋಟರಿ ಜಿಲ್ಲಾ ಗವರ್ನರ್ ರೊ.ಪಾಲಾಕ್ಷ ಕೆ., ಶಾಲಾಶಿಕ್ಷಣ ಇಲಾಖೆ ಉಪ ನಿರ್ದೇಶಕ ಕೆ.ಎನ್.ಬಲರಾಮ್, ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ರಂಗನಾಥ್, ರೋಟರಿ ಜೋನ್ 9ರ ಸಹಾಯಕ ಗವರ್ನರ್ ಜೆ.ಎನ್.ಮಂಜುನಾಥ್, ಅವರು ಭಾಗವಹಿಸುವರು. ಪ್ರತಿ ವರ್ಷದ ಕಾರ್ಯಕ್ರಮದಲ್ಲಿ ಸುಮಾರು 1200ಕ್ಕೂ ಅಧಿಕ ಎಸ್.ಎಸ್.ಎಲ್.ಸಿ. ಮಕ್ಕಳು ಅದರ ಸದುಪಯೋಗ ಪಡೆದುಕೊಂಡು ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡುತ್ತಿದ್ದಾರೆ. ಪ್ರತಿ ವರ್ಷದಂತೆ ಈ ವರ್ಷವೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಹಾಗು ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ವತಿಯಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆಂದು ಹೇಳಿದರು.

ಶಿಬಿರದ ಅಧ್ಯಕ್ಷ ಯೋಗೀಶ್, ಕಾರ್ಯದರ್ಶಿ ರವಿಕುಮಾರ್, ಖಜಾಂಚಿಹೆಚ್.ಕೆ.ದಿಲೀಪ್ ಕುಮಾರ್, ಮಾಜಿ ಅಧ್ಯಕ್ಷ ಸಚಿನ್, ರೊಟೇರಿಯನ್ ಶ್ರೀನಂದ ಇದ್ದರು.

# ವಾಯು ಮಾಲಿನ್ಯ ನಿಯಂತ್ರಣ: ತುರ್ತು ಕ್ರಮಕ್ಕೆ ಕೈ ಆಗ್ರಹ

• ಪ್ರಜೋದಯ ವರದಿ

**ನವದೆಹಲಿ:** ಗಂಗಾ ನದಿ ಬಯಲು ಪ್ರದೇಶ ಹಾಗೂ ಹಿಮಾಲಯ ತಪ್ಪಲು ಪ್ರದೇಶಗಳಲ್ಲಿ ವಾಯು ಮಾಲಿನ್ಯದಿಂದ ಆಗುತ್ತಿರುವ ಅನಾಹುತಗಳ ಕುರಿತು ವಿಶ್ವಬ್ಯಾಂಕ್ ಪ್ರಕಟಿಸಿರುವ ವರದಿಯನ್ನು ಮುಂದಿಟ್ಟು ಕೊಂಡು ಕಾಂಗ್ರೆಸ್ ಪಕ್ಷ ಕೇಂದ್ರ ಸರ್ಕಾರದ ವಿರುದ್ಧ ಭಾನುವಾರ ವಾಗ್ದಾಳಿ ನಡೆಸಿದೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ವಾಯು ಮಾಲಿನ್ಯದಿಂದ ಆಗುತ್ತಿರುವ ಪರಿಣಾಮಗಳನ್ನು ಎಲ್ಲಿಯವರೆಗೆ ನಿರಾಕರಿಸಲಿದೆ. ಈ ವಿಚಾರವನ್ನು ಯಾವಾಗ ಗಂಭೀರವಾಗಿ ತೆಗೆದು ಕೊಳ್ಳಲಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಪ್ರಶ್ನಿಸಿದ್ದಾರೆ.

ವಿಶ್ವ ಬ್ಯಾಂಕ್ ಇತ್ತೀಚೆಗೆ ಎ ಬ್ರೀತ್ ಆಫ್ ಚೇಂಜ್ ಎಂಬ ವರದಿ ಪ್ರಕಟಿಸಿದೆ. ಇಂಡೊ ಗಂಗಾ ನದಿ ಬಯಲು ಪ್ರದೇಶ ಹಾಗೂ ಹಿಮಾಲಯ ತಪ್ಪಲು ಪ್ರದೇಶಗಳಲ್ಲಿ (ಐಜಿಪಿಎಚ್‌ಎಫ್) ವಾಯುಮಾಲಿನ್ಯದಿಂದ ಆಗುತ್ತಿರುವ ಪರಿಣಾಮಗಳ ಕುರಿತು ಈ ವರದಿಯಲ್ಲಿ ಉಲ್ಲೇಖಿಸಲಾಗಿದೆ.



- ಐಜಿಪಿಎಚ್‌ಎಫ್ ವ್ಯಾಪ್ತಿಯಲ್ಲಿ ಬರುವ ದೇಶಗಳಲ್ಲಿ ಈಗಲೂ ಅಡುಗೆ ಮತ್ತು ಕಾಯಿಸುವುದಕ್ಕೆ ಸೌದೆಗಳನ್ನು ಬಳಸಲಾಗುತ್ತದೆ. ಉದ್ದಿಮೆಗಳಲ್ಲಿ ಪಳೆಯುಳಿಕೆ ಇಂಧನಗಳ ಅವೈಜ್ಞಾನಿಕ ಬಳಕೆ ಇದೆ. ಇದರಿಂದ ವಾಯುಮಾಲಿನ್ಯ ಹೆಚ್ಚುತ್ತಿದೆ
- ಇಂತಹ ಇಂಧನಗಳನ್ನು ಬಳಸಿದಾಗ ಹೊರಹೊಮ್ಮುವ ಹೊಗೆಯನ್ನು ಸಂಸ್ಕರಿಸುವ ತಂತ್ರ, ಜ್ಞಾನವನ್ನು ಬಳಕೆ ಮಾಡಲಾಗುತ್ತಿಲ್ಲ
- ಐಜೆಪಿಎಚ್‌ಎಫ್ ವ್ಯಾಪ್ತಿಯಲ್ಲಿ ನೂರು ಕೋಟಿಯಷ್ಟು ಜನರು ಕಲುಷಿತ ಗಾಳಿಯನ್ನೇ ಉಸಿರಾಡುತ್ತಿದ್ದಾರೆ. ಅದರಿಂದ ಪ್ರತಿ ವರ್ಷ ಅಂದಾಜು 10 ಲಕ್ಷ ಜನರು ಅಕಾಲಿಕವಾಗಿ ಸಾಯುತ್ತಿದ್ದಾರೆ
- ವಾಯುಮಾಲಿನ್ಯದಿಂದಾಗಿ ಅರ್ಥಿಕವಾಗಿಯೂ ನಷ್ಟವಾಗುತ್ತಿದೆ. ಇಂತಹ ನಷ್ಟವು ಆಯಾ ಪ್ರದೇಶಗಳ ವಾರ್ಷಿಕ ಜಿಡಿಪಿಯ ಶೇ.10ರಷ್ಟಾಗಲಿದೆ.

ಭಾರತ, ಬಾಂಗ್ಲಾದೇಶ, ಭೂತಾನ್, ನೇಪಾಳ ಮತ್ತು ಪಾಕಿಸ್ತಾನ ಈ ಐಜಿಪಿಎಚ್‌ಎಫ್ ವ್ಯಾಪ್ತಿಯಲ್ಲಿನ ದೇಶಗಳಾಗಿವೆ. ವಾಯುಮಾಲಿನ್ಯದ ಪರಿಣಾಮ ಈ ದೇಶಗಳಲ್ಲಿ ಒಂದು ವರ್ಷದಲ್ಲಿ 10 ಲಕ್ಷದಷ್ಟು ಜನರು ಅಕಾಲಿಕವಾಗಿ ಮರಣ ಹೊಂದುತ್ತಿದ್ದಾರೆಂದು ಈ ವರದಿಯಲ್ಲಿ ವಿವರಿಸಲಾಗಿದೆ.

ಐಜಿಪಿ-ಎಚ್‌ಎಫ್ ವ್ಯಾಪ್ತಿಯಲ್ಲಿ ವಾಯು ಮಾಲಿನ್ಯ ತಡೆಗಟ್ಟಲು ವಿಶ್ವ ಬ್ಯಾಂಕ್ ವರದಿಯಲ್ಲಿ ಹಲವಾರು ಕ್ರಮಗಳನ್ನು ಸೂಚಿಸಲಾಗಿದೆ. ಕಲ್ಲಿದ್ದಲು ಬಳಸಿ ವಿದ್ಯುತ್ ಉತ್ಪಾದಿಸುವ ಘಟಕಗಳು ಹೊರಸೂಸುವ ಹೊಗೆಯನ್ನು ನಿಯಂತ್ರಿಸಬೇಕು, ಹಳೆಯ ಘಟಕಗಳನ್ನು ಸ್ಥಗಿತಗೊಳಿಸಬೇಕು ಎಂಬಂತಹ ಸಲಹೆಗಳನ್ನು ನೀಡಲಾಗಿದ್ದು, ಅವುಗಳ ಬಗ್ಗೆ ಸರ್ಕಾರ ಗಮನ ಹರಿಸಬೇಕೆಂದು ಒತ್ತಾಯಿಸಿದ್ದಾರೆ.

ವಾಯು ಮಾಲಿನ್ಯ (ನಿಯಂತ್ರಣ) ಕಾಯ್ದೆ ಹಾಗೂ ರಾಷ್ಟ್ರೀಯ ವಾಯು ಗುಣಮಟ್ಟ ಮಾನದಂಡಗಳನ್ನು (ಎನ್‌ಎಎಕ್ಯೂಎಸ್) ಪರಿಷ್ಕರಿಸುವಂತೆ ಕಾಂಗ್ರೆಸ್ ಒತ್ತಾಯಿಸುತ್ತಲೇ ಬಂದಿದೆ ಎಂದು ಅವರು ಹೇಳಿದ್ದಾರೆ.

# ಚೀನಾದ ಉಕ್ಕಿನ ಸ್ಥಾವರದಲ್ಲಿ ಭಾರಿ ಸ್ಫೋಟ: 2 ಸಾವು, 66 ಜನರಿಗೆ ಗಾಯ

• ಪ್ರಜೋದಯ ವರದಿ

**ಬೀಜಿಂಗ್:** ಚೀನಾದ ಬಾಟೌ ನಗರದಲ್ಲಿರುವ ಉಕ್ಕಿನ ಸ್ಥಾವರದಲ್ಲಿ ಭಾನುವಾರ ಸಂಭವಿಸಿದ ಭಾರೀ ಸ್ಫೋಟದಲ್ಲಿ ಇಬ್ಬರು ಸಾವಿಗೀಡಾಗಿದ್ದು, 66 ಜನರು ಗಾಯಗೊಂಡಿದ್ದಾರೆ. ಘಟನೆಯಲ್ಲಿ ಐದು ಜನರು ಕಾಣೆಯಾಗಿದ್ದಾರೆ.



ಸ್ಫೋಟದ ತೀವ್ರತೆ ಎಷ್ಟು ಇತ್ತು ಎಂದರೆ, ಚೀನಾದ ಮಂಗೋಲಿಯಾ ಸ್ವಾಯತ್ತ ಪ್ರದೇಶವಾಗಿರುವ ಬಾಟೌ ನಗರದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭೂಮಿ ಕಂಪಿಸಿದ ಅನುಭವವಾಗಿದೆ ಎಂದು ಸರ್ಕಾರಿ ಸುದ್ದಿ ಸಂಸ್ಥೆ ಕ್ಸಿನ್ಹುವಾ ವರದಿ ಮಾಡಿದೆ. ಸ್ಫೋಟಕ್ಕೆ ಕಾರಣ ಏನೆಂದು ತನಿಖೆ ಬಳಿಕವಷ್ಟೆ ತಿಳಿದು ಬರಲಿದೆ ಎಂದು ವರದಿ ತಿಳಿಸಿದೆ.

ಘಟನೆಯ ವಿಡಿಯೋಗಳು ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡುತ್ತಿದ್ದು, ಸ್ಫೋಟದ ರಭಸಕ್ಕೆ ಬೆಂಕಿಯ ಜ್ವಾಲೆ ಉಂಟಾಗಿದೆ. ಆ ಜ್ವಾಲೆ ಇಡೀ ಕಾರ್ಖಾನೆಯನ್ನು ಆವರಿಸಿರುವುದನ್ನು ಕಾಣಬಹುದು. ಗಾಯಗೊಂಡಿರುವ 66 ಜನರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ ಮೂವರ ಸ್ಥಿತಿ ಗಂಭೀರವಾಗಿದೆ ಎಂದು ವರದಿ ತಿಳಿಸಿದೆ.

# ಪೊಲೀಸ್ ಅಫೀಷಿಯಲ್ ನೌಕರರ ಸಹಕಾರದ ಚುನಾವಣೆ



• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಪೊಲೀಸ್ ಅಫೀಷಿಯಲ್ ನೌಕರರ ಸಹಕಾರ ಸಂಘದ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಕ್ಕೆ ಭಾನುವಾರ ನಡೆದ ಚುನಾವಣೆಗೆ ಸ್ಪರ್ಧೆ ಮಾಡಿದ್ದ 43 ಜನರಲ್ಲಿ 16 ಜನರು ನಿರ್ದೇಶಕರಾಗಿ ಗೆಲುವು ಸಾಧಿಸಿದ್ದಾರೆ. ಒಬ್ಬರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಹಿಂದುಳಿದ ವರ್ಗ-ಬಿ ಸ್ಥಾನಕ್ಕೆ ಮೀಸಲಾಗಿದ್ದ ಸ್ಥಾನದಿಂದ ಎಸ್.ಎನ್.ದಿನೇಶ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಮಹಿಳಾ ಮೀಸಲು ಸ್ಥಾನದಿಂದ ಬಿ.ಶಾಮಲ, ಕವಿತಾ, ಪರಿಶಿಷ್ಟ ಜಾತಿಗೆ ಮೀಸಲಾಗಿದ್ದ ಸ್ಥಾನದಿಂದ ಪೃಥ್ವಿ, ಪರಿಶಿಷ್ಟ ಪಂಗಡದಿಂದ ಮೋಹನ್ ಕುಮಾರ್, ಹಿಂದುಳಿದ ವರ್ಗ (ಎ) ಸ್ಥಾನದಿಂದ ಮೊಹಮದ್ ಇಸ್ಮಾಯಿಲ್ ಅವರು ಗೆಲುವು ಸಾಧಿಸಿದ್ದಾರೆ.

ಸಾಮಾನ್ಯ ಸ್ಥಾನಕ್ಕೆ ಸ್ಪರ್ಧೆ ಮಾಡಿದ್ದ ಹೆಚ್.ಎಸ್.ನಂಜಪ್ಪ, ಕೆ.ಆರ್.ನಂದಕುಮಾರ್, ದಿಲೀಪ್, ಗಿಡ್ಡೇಗೌಡ, ಧರ್ಮ, ಹೆಚ್.ಎನ್.ಅನಂತ, ಜಿ.ಯೋಗೇಶ್, ಸಿ.ಡಿ.ಪುರುಷೋತ್ತಮ, ಗುರುಮೂರ್ತಿ, ಆರ್.ಎನ್.ಪಾಲಾಕ್ಷ, ಜಿ.ಕೆ.ರಾಜೇಂದ್ರ ಅವರು ಗೆಲುವು ಸಾಧಿಸಿದ್ದಾರೆ.

# ಸ್ವಾರ್ಥ ಮನೋಭಾವದಿಂದ ಹೊರ ಬನ್ನಿ: ಪುಷ್ಪಗಿರಿ ಶ್ರೀ

• ಪ್ರಜೋದಯ ವರದಿ



**ಅರೇಹಳ್ಳಿ:** ಜನರು ವಾಸ್ತವಿಕ ಜೀವನದ ಪರಿಕಲ್ಪನೆಯನ್ನು ಅರ್ಥೈಸಿಕೊಳ್ಳದೆ ತಾನು, ತನಗಾಗಿ ಎಂಬ ಸ್ವಾರ್ಥ ಮನೋಭಾವದಲ್ಲಿ ಬದುಕಲು ಮುಂದಾಗುತ್ತಿರುವುದು ದುರದೃಷ್ಟಕರ ಸಂಗತಿ ಎಂದು ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಹೇಳಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ಣ ಕಾಲೇಜು ಮೈದಾನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಅರೇಹಳ್ಳಿ ವಲಯದಿಂದ ಹಮ್ಮಿಕೊಂಡಿದ್ದ ಸತ್ಯನಾರಾಯಣ ಪೂಜೋತ್ಸವದ ಬಳಿಕ ನಡೆದ ಧಾರ್ಮಿಕ ಸಭೆಯಲ್ಲಿ ಪ್ರವಚನ ನೀಡಿದ ಅವರು, ತಾನು, ತನಗಾಗಿ ಎಂಬ ಭಾವನೆಯನ್ನು ಬಿಟ್ಟು ನಮ್ಮವರಿಗಾಗಿ, ನಮ್ಮ ಸಮಾಜಕ್ಕಾಗಿ ಎಂಬ ಗುಣವನ್ನು ಬೆಳೆಸಿಕೊಂಡಾಗಲೇ ದೇಶ ಇನ್ನಷ್ಟು ಸುಧಾರಣೆಯ ಹಾದಿಯತ್ತ ಸಾಗುತ್ತದೆ ಎಂದು ತಿಳಿಸಿದರು.

ಮನುಷ್ಯನಲ್ಲಿರುವ ಹೊಟ್ಟೆ ಕಿಚ್ಚು ಬೇರೆಯವರನ್ನು ಸುಡುವ ಮೊದಲು ತನ್ನನ್ನೇ ಸರ್ವನಾಶ ಮಾಡುವುದರಿಂದ ಎಲ್ಲರೂ ಜಾಗೃತರಾಗಿ ಅಸೂಹೆ ಹೊರತಾದ ಜೀವನ ಸಾಗಿಸಬೇಕು. ಕೂಡಿಟ್ಟ ಸಂಪತ್ತು ಕ್ಷಣಿಕವಾಗಿದ್ದು, ಕೂಡಿಟ್ಟ ಸಂಪತ್ತನ್ನು ಸಮಾಜದ ಒಳಿತಿಗಾಗಿ ಬಳಸಬೇಕು. ಕೋಟಿ-ಕೋಟಿ ಹಣ ಮಾಡಿದ ಧನವಂತರು ಸಮಾಜಕ್ಕೆ ಕೊಡುಗೆ ನೀಡದೇ ಹೋದಲ್ಲಿ ಅಂತಹ ಸಂಪತ್ತಿಗೆ ಬೆಲೆ ಇಲ್ಲ ಎಂದರು.

ಮನೆಗೆ ಆಗಮಿಸಿದ ಅತಿಥಿಗಳನ್ನು ಪ್ರೀತಿಯಿಂದ ಕಾಣುತ್ತಾರೆ. ಆದರೆ, ಪಟ್ಟಣಗಳಲ್ಲಿ ಮನೆಯ ಸದಸ್ಯರಿಗೆ ಸಮಯದ ಕೊರತೆ ಇರುವುದರಿಂದ ಅತಿಥಿಗಳನ್ನು ಸರಿಯಾಗಿ ಉಪಚರಿಸಲು ಸಾಧ್ಯವಾಗುವುದಿಲ್ಲ. ಬಡವನ ಮನೆಗೆ ಹೋದರೆ ಸಿಗುವ ಪ್ರೀತಿ ವಿಶ್ವಾಸ ಶ್ರೀಮಂತರ ಮನೆಗೆ ಹೋದರೆ ಸಿಗುವುದಿಲ್ಲ. ಗ್ರಾಮೀಣ ಪ್ರದೇಶದ ನಿವಾಸಿಗಳು ಪಟ್ಟಣದಲ್ಲಿ ಸಿಗುವ ಐಶಾರಾಮಿ ಜೀವನಕ್ಕೆ ಮಾರು ಹೋಗದೆ ಹಳ್ಳಿಗಳಲ್ಲಿ ಪ್ರಕೃತಿ ಹಾಗು ಭಗವಂತನನ್ನು ಆರಾಧಿಸಿಕೊಂಡು ಬಾಳಬೇಕು ಎಂದರು.

ಮಕ್ಕಳನ್ನು ಹೆತ್ತರೆ ಸಾಕಾಗುವುದಿಲ್ಲ, ಅವರನ್ನು ಹೇಗೆ ಬೆಳೆಸಬೇಕೆಂಬ ಜ್ಞಾನ ಬಹಳ ಮುಖ್ಯವಾಗಿದೆ. ಶಾಸ್ತ್ರ ಬಳಸದೆ, ಹಿಂಸೆ ಮಾಡದೆ ದೇಶವನ್ನು, ಧರ್ಮವನ್ನು ಹಾಗು ಕುಟುಂಬವನ್ನು ರಕ್ಷಿಸುವ ಆಯುಧವೆಂದರೆ ಮಾತೆಯರು. ಆದ್ದರಿಂದ ಎಲ್ಲಾ ಮಾತೆಯರು ತಮ್ಮ ಮಕ್ಕಳ ಮನಸ್ಸನ್ನು ಆಯುಧವನ್ನಾಗಿ ಮಾಡಿ ದೇಶಾಭಿಮಾನ ಬೆಳೆಸಬೇಕು. ನಾವು ಭಾರತವನ್ನು ಮಾತೆಯ ರೂಪದಲ್ಲಿ ಕಾಣುತ್ತೇವೆ. ಅಂತಹ ಮಾತೆಯರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ದೇಶಕ್ಕೆ ಮಹಾನ್ ವ್ಯಕ್ತಿಗಳನ್ನು ರೂಪಿಸುವ ಸಂಕಲ್ಪ ಮಾಡಬೇಕೆಂದು ಹೇಳಿದರು.

ಟ್ರಸ್ಟ್ ಜಿಲ್ಲಾ ನಿರ್ದೇಶಕ ಸುರೇಶ್ ಮೊಯ್ಲಿ ಅವರು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಮಹಿಳೆಯರು, ರೈತರು, ಅಸಹಾಯಕ ವ್ಯಕ್ತಿಗಳ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗೆ ನೀಡಲಾಗುತ್ತಿರುವ ವಿವಿಧ ಸೌಲಭ್ಯಗಳ ಕುರಿತು ವಿಸ್ತೃತ ಮಾಹಿತಿ ನೀಡಿದರು. ಈ ವೇಳೆ ವಿಶೇಷಚೇತನ ಬಡ ಮಹಿಳೆಗೆ ವೀಲ್‌ಚೇರ್, ಮನೆ ಕಳೆದುಕೊಂಡ ಮತ್ತೊಬ್ಬ ಮಹಿಳೆಗೆ ಸಹಾಯ ಧನವನ್ನು ಹಸ್ತಾಂತರಿಸಲಾಯಿತು. ಸತ್ಯನಾರಾಯಣ ಪೂಜಾ ಸಮಿತಿಯ ಅಧ್ಯಕ್ಷ ಎ.ಜೆ. ಶಶಿಕುಮಾರ್, ಪದಾಧಿಕಾರಿಗಳು, ಸದಸ್ಯರು ಮುಂತಾದವರು



• ಪ್ರಜೋದಯ ವರದಿ

# ಹಲವು ದಾಖಲೆಗಳ ಬರೆದ ನ್ಯೂಜಿಲೆಂಡ್‌ನ ಸ್ಟಾರ್ ಬ್ಯಾಟರ್ ಡರಿಲ್ ಮಿಚೆಲ್

**ಇಂದೋರ್ :** ಭಾರತದ ವಿರುದ್ಧದ ಮೂರನೇ ಹಾಗೂ ಅಂತಿಮ ಏಕದಿನ ಪಂದ್ಯದಲ್ಲಿ ಭರ್ಜರಿ ಶತಕ ಸಿಡಿಸಿದ ನ್ಯೂಜಿಲೆಂಡ್ ಸ್ಟಾರ್ ಬ್ಯಾಟರ್ ಡರಿಲ್ ಮಿಚೆಲ್ ಹಲವು ದಾಖಲೆಗಳಿಗೆ ಪಾತ್ರರಾಗಿದ್ದಾರೆ.

ಇಂದೋರ್‌ನ ಹೋಳ್ಕರ್ ಕ್ರಿಕೆಟ್ ಮೈದಾನದಲ್ಲಿ ನಡೆಯುತ್ತಿರುವ ಮೂರನೇ ಪಂದ್ಯದಲ್ಲಿ ಟಾಸ್ ಸೋತರೂ ಬ್ಯಾಟಿಂಗ್ ಮಾಡುವ ಅವಕಾಶ ಪಡೆದ ನ್ಯೂಜಿಲೆಂಡ್ ತಂಡ ನಿಗದಿತ 50 ಓವರ್ ನಲ್ಲಿ ಡರಿಲ್ ಮಿಚೆಲ್ (137) ಮತ್ತು ಗ್ಲೇನ್ ಫಿಲಿಪ್ಸ್ (106) ಅವರ ಅಮೋಘ ಶತಕಗಳ ನೆರವಿನಿಂದ 8 ವಿಕೆಟ್ ಕಳೆದುಕೊಂಡು 337 ರನ್ ಪೇರಿಸಿತು.

ಆರಂಭಿಕ ಆಘಾತದ ಹೊರತಾಗಿಯೂ ನ್ಯೂಜಿಲೆಂಡ್ ಪರ ಡರಿಲ್ ಮಿಚೆಲ್ ಸ್ಫೋಟಕ ಬ್ಯಾಟಿಂಗ್ ಮಾಡಿದರು. ಕೇವಲ 131 ಎಸೆತಗಳಲ್ಲಿ 3 ಸಿಕ್ಸರ್ ಮತ್ತು 15 ಬೌಂಡರಿಗಳ ಸಹಿತ 137 ರನ್ ಸಿಡಿಸಿದರು. ಅವರಿಗೆ ಉತ್ತಮ ಸಾಥ್ ನೀಡಿದ ಗ್ಲೇನ್ ಫಿಲಿಪ್ಸ್ ಕೂಡ 88 ಎಸೆತಗಳಲ್ಲಿ 3 ಸಿಕ್ಸರ್ ಮತ್ತು 9 ಬೌಂಡರಿಗಳ ಸಹಿತ 106 ರನ್ ಚಚ್ಚಿದರು.

ಇನ್ನು ಈ ಪಂದ್ಯದಲ್ಲಿ ಮಿಚೆಲ್ ಗಳಿಸಿದ 137ರನ್ ನ್ಯೂಜಿಲೆಂಡ್ ಪರ ಭಾರತದ ವಿರುದ್ಧ ದಾಖಲಾದ ಬ್ಯಾಟರ್ ಒಬ್ಬರ 4ನೇ ಗರಿಷ್ಠ ವೈಯುಕ್ತಿಕ ರನ್ ಗಳಿಕೆಯಾಗಿದೆ. ಇದಕ್ಕೂ ಮೊದಲು 2022ರಲ್ಲಿ ಆಕ್ಲೆಂಡ್ ಪಂದ್ಯದಲ್ಲಿ ಟಾಮ್ ಲಾಥಮ್ ಅಜೇಯ 145ರನ್ ಸಿಡಿಸಿದ್ದರು. ಇದು ಭಾರತದ ವಿರುದ್ಧ ನ್ಯೂಜಿಲೆಂಡ್ ಬ್ಯಾಟರ್ ಗಳಿಸಿದ ಗರಿಷ್ಠ ವೈಯುಕ್ತಿಕ ರನ್ ಗಳಿಕೆಯಾಗಿದೆ.

3 ಪಂದ್ಯಗಳ ಏಕದಿನ ಸರಣಿಯಲ್ಲಿ ಗರಿಷ್ಟ ರನ್

ಇನ್ನು ಇಂದಿನ ಶತಕವೂ ಸೇರಿ ಭಾರತದ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಡರಿಲ್ ಮಿಚೆಲ್ ಒಟ್ಟು 352 ರನ್ ಕಲೆಹಾಕಿದ್ದಾರೆ. ಆ ಮೂಲಕ 3 ಪಂದ್ಯಗಳ ದ್ವಿಪಕ್ಷೀಯ ಏಕದಿನ ಸರಣಿಯಲ್ಲಿ ಗರಿಷ್ಟ ರನ್ ಕಲೆಹಾಕಿದ 3ನೇ ಆಟಗಾರ ಎನಿಸಿಕೊಂಡಿದ್ದಾರೆ. ಇದಕ್ಕೂ ಮೊದಲು ಪಾಕಿಸ್ತಾನದ ಬಾಬರ್ ಆಜಂ ವೆಸ್ಟ್ ಇಂಡೀಸ್ ವಿರುದ್ಧದ 3 ಏಕದಿನ ಪಂದ್ಯಗಳ ಸರಣಿಯಲ್ಲಿ 360 ರನ್ ಕಲೆಹಾಕಿದ್ದರು. ಅಂತೆಯೇ 2023ರಲ್ಲಿ ಇದೇ ನ್ಯೂಜಿಲೆಂಡ್ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಭಾರತ ತಂಡದ ನಾಯಕ ಶುಭ್ ಮನ್ ಗಿಲ್ 360 ರನ್ ಕಲೆಹಾಕಿದ್ದರು.

ಭಾರತದ ವಿರುದ್ಧ ಗರಿಷ್ಠ ಬ್ಯಾಟಿಂಗ್ ಸರಾಸರಿ

ಇನ್ನು ಭಾರತ ತಂಡದ ವಿರುದ್ಧ ಗರಿಷ್ಠ ಬ್ಯಾಟಿಂಗ್ ಸರಾಸರಿ ಹೊಂದಿರುವ ಬ್ಯಾಟರ್‌ಗಳ ಪಟ್ಟಿಯಲ್ಲೂ ಡರಿಲ್ ಮಿಚೆಲ್ ಅಗ್ರಸ್ಥಾನಕ್ಕೇರಿದ್ದು, ಡರಿಲ್ ಮಿಚೆಲ್ ಬರೊಬ್ಬರಿ 74.1 ಬ್ಯಾಟಿಂಗ್ ಸರಾಸರಿ ಹೊಂದಿದ್ದಾರೆ. 2ನೇ ಸ್ಥಾನದಲ್ಲಿ 71ರ ಸರಾಸರಿ ಹೊಂದಿರುವ ಜಾರ್ಜ್ ಬೈಲಿ ಇದ್ದು, 62.6 ಸರಾಸರಿ ಹೊಂದಿದ್ದ ದಕ್ಷಿಣ ಆಫ್ರಿಕಾದ ಗ್ಯಾರಿ ಕರ್ಸ್ಟನ್ 3, ಅದೇ ತಂಡ ಜಾಕಸ್ ಕಾಲಿಸ್ 61.4 ಸರಾಸರಿಯೊಂದಿಗೆ 4ನೇ ಸ್ಥಾನದಲ್ಲಿದ್ದಾರೆ.

# ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡಲ್ಲ : ಸಿ.ಎನ್.ಬಾಲಕೃಷ್ಣ

» ಮೊದಲನೇ ಪುಟದಲ್ಲಿ

ಹಿರೇಮಂದಿ ಹಾಗು ಕುಮ್ಮತ್ತಹಳ್ಳಿ ರಸ್ತೆಗಳನ್ನು 2.75 ಕೋ.ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಿ ಸಾರ್ವಜನಿಕರ ಬಳಕೆಗೆ ಲೋಕಾರ್ಪಣೆ ಮಾಡಲಾಗಿದೆ ಎಂದು ಹೇಳಿದರು. ದೇವಾಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಈಗಾಗಲೇ ಹಲವು ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿದ್ದು, ಇನ್ನೂ ಕೆಲವು ಕಾಮಗಾರಿಗಳಿಗೆ ಶೀಘ್ರದಲ್ಲೇ ಭೂಮಿ ಪೂಜೆ ನೆರವೇರಿಸಲಾಗುವುದು. ಸಾರ್ವಜನಿಕರು ಸುಗಮವಾಗಿ ಸಂಚರಿಸುವ ರಸ್ತೆ, ಕುಡಿಯುವ ನೀರು ಹಾಗು ವಿದ್ಯುತ್‌ನಂತಹ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಜನಪ್ರತಿನಿಧಿಗಳ ಕರ್ತವ್ಯ. ಈ ನಿಟ್ಟಿನಲ್ಲಿ ನಾನು ಪ್ರಾಮಾಣಿಕ ಪ್ರಯತ್ನ ನಡೆಸಿದ್ದೇನೆಂದು ಹೇಳಿದರು. ಗ್ರಾಮ ಪಂಚಾಯಿತಿ ಸದಸ್ಯರು, ಪಕ್ಷದ ಮುಖಂಡರು, ಗ್ರಾಮಸ್ಥರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಗುಣಮಟ್ಟದ ಶಿಕ್ಷಣದಿಂದ ಸಮಾಜ ಸುಧಾರಣೆ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಮೌಲ್ಯಯುತ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ನೀಡುವ ಮೂಲಕ ಶೈಕ್ಷಣಿಕ ವ್ಯವಸ್ಥೆಯನ್ನು ಅಭಿವೃದ್ಧಿಗೂಳಿಸಿದರೆ ಮಾತ್ರ ಸಮಾಜದ ಸುಧಾರಣೆ ಕಾಣಲು ಸಾಧ್ಯ ವೆಂದುಶಾಸಕ ಸಿ.ಎನ್. ಬಾಲಕೃಷ್ಣ ಅವರು ಹೇಳಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದ ಜ್ಞಾನಪ್ರಭ ಇಂಟರ್ ನ್ಯಾಷನಲ್ ಸ್ಕೂಲ್ ಆವರಣದಲ್ಲಿ ಶನಿವಾರ ರಾತ್ರಿ ಏರ್ಪಡಿಸಿದ್ದ ಶಾಲಾ ವಾರ್ಷಿಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜ ಸುಧಾರಣೆ ಹೊಂದಿದ್ದಲ್ಲಿ ಮಾತ್ರ ದೇಶ ಪ್ರಗತಿ ಕಾಣಲು ಸಾಧ್ಯ. ಮಕ್ಕಳಿಗೆ ಮೊಬೈಲ್ ನೀಡುವುದನ್ನು ನಿಲ್ಲಿಸಬೇಕು. ಮಕ್ಕಳ ಶೈಕ್ಷಣಿಕ ಹಾಗೂ ದೈನಂದಿನ ಚಟುವಟಿಕೆಗಳ ಬಗ್ಗೆ ಪಾಲಕರು ಗಮನ ಹರಿಸಬೇಕು. ಇದರಿಂದ ಅವರ ಬದುಕನ್ನು ಸುಂದರವಾಗಿ ಕಟ್ಟಲು ಸಹಕಾರಿ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಅವಿಭಕ್ತ ಕುಟುಂಬಗಳು ಕಣ್ಮರೆಯಾಗುತ್ತಿವೆ. ವಿಭಕ್ತ ಕುಟುಂಬಗಳಿರಲಿ, ಹೆತ್ತವರು ಹಾಗೂ ಮಕ್ಕಳೇ ಬೇರೆ-ಬೇರೆ ಇರಬೇಕಾದ ಅನಿವಾರ್ಯತೆ ಎದುರಾಗಿದೆ. ಶಿಕ್ಷಣದ ವ್ಯವಸ್ಥೆ ಹಾಗೂ ಆಧುನಿಕತೆ ಬೆಳೆದಂತೆಲ್ಲಾ ಸಂಬಂಧಗಳ ಕೊಂಡಿ ಸಡಿಲವಾಗುತ್ತಿದೆ. ಅನಾಥಾಶ್ರಮ ಹಾಗೂ ವೃದ್ಧಾಶ್ರಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಹಾಸ್ಯ ನಟ, ಕಾಮಿಡಿ ಕಿಲಾಡಿಗಳು ಖ್ಯಾತಿಯ ಕೆ.ಆರ್.ಪೇಟೆ ಶಿವರಾಜು ಅವರು ಮಾತನಾಡಿ, ಆಧುನಿಕತೆ ಸಾಕಷ್ಟು ಮುಂದುವರಿದಿದ್ದು ಮೊಬೈಲ್ ಬಳಕೆ ಬಂದ ಮೇಲೆ ಪೌರಾಣಿಕ ನಾಟಕ ಪ್ರದರ್ಶನ, ಯಕ್ಷಗಾನ, ಜಾನಪದ, ಕೋಲಾಟ ಹಾಗೂ ಗ್ರಾಮೀಣ ಕ್ರೀಡೆಗಳು ಕಣ್ಮರೆಗೆ ಸರಿದಿವೆ. ಇಂದಿನ ಮಕ್ಕಳಿಗೆ ತಿಳಿದಿಲ್ಲ. ಇದರಿಂದ ಗ್ರಾಮೀಣ ಸೊಗಡಿನ ಮೌಲ್ಯ ಕಳೆದುಕೊಳ್ಳುತ್ತಿದೆ



ಎಂದು ಕಳವಳ ವ್ಯಕ್ತಪಡಿಸಿದರು.


ಹೆತ್ತವರ ವಿವಾಹ ವಾರ್ಷಿಕೋತ್ಸವ ಇಲ್ಲವೇ ಹುಟ್ಟು ಹಬ್ಬ ಕುರಿತು ಮೊಬೈಲ್‌ನಲ್ಲಿ ಸ್ಟೇಟಸ್ ಹಾಕಿದರೆ ಏನು ಸಿಗುವುದಿಲ್ಲ. ಬದಲಿಗೆ ಅವರೊಂದಿಗೆ ಬೆರೆತು ಮಾತನಾಡಿ ಅವರು ನಡೆದು ಬಂದ ಬದುಕಿನ ಹಾದಿಯ ಬಗ್ಗೆ ತಿಳಿದುಕೊಳ್ಳಿ. ಅದನ್ನು ಅನುಸರಿಸಿದರೆ ಬದುಕು ಬಂಗಾರವಾಗಲಿದೆ. ಮೊಬೈಲ್ ಸ್ಕ್ರೀನ್ ಟಚ್‌ನಲ್ಲಿ ಇರ ಬೇಡಿ, ಬದಲಿಗೆ ಒಬ್ಬರಿಗೊಬ್ಬರು ಟಚ್‌ನಲ್ಲಿರಿ ಎಂದು ಸಲಹೆ ನೀಡಿದರು.

ಮೊಬೈಲ್ ಬಳಕೆಯೇ ಬದುಕಾಗಬಾರದು. ಬಳಕೆ ಹೆಚ್ಚಿದಂತೆಲ್ಲಾ ಟೆಲಿಗ್ರಾಂ, ರೇಡಿಯೋ, ಟೇಪ್ ರೆಕಾರ್ಡರ್ ವಿಸಿಪಿ ಹಾಗೂ ಕಾಗದ ಬರೆಯುವ ಕಲೆ ಸೇರಿ ಸಂಬಂಧಗಳನ್ನು ಕಳೆದುಕೊಂಡಿದ್ದೇವೆ. ಸಂಬಂಧಗಳ ಮೌಲ್ಯ ಕುಸಿದಂತೆಲ್ಲಾ ಸಹಬಾಳ್ವೆಯ ಬದುಕು ನೆಲ ಹಿಡಿಯುತ್ತಿದೆ ಎಂದರು.

ಇನ್ನು ಮಕ್ಕಳು ಓದಿ ಏನಾಗಬೇಕು ಅಥವಾ ಬೆಳೆದು ಯಾವ ವೃತ್ತಿ ಪಡೆಯಬೇಕೆಂದು ಕೊಂಡಿರುತ್ತಾ ರೆಯೋ ಅದನ್ನು ಗಮನಿಸಿ ಪ್ರೋತ್ಸಾಹ ನೀಡಿದರೆ ಭವಿಷ್ಯದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳುತ್ತಾರೆ. ಇಲ್ಲವೇ ನಿಮಗಿಷ್ಟ ಬಂದಂತೆ ಒತ್ತಡ ಏರಿದರೆ ಮಕ್ಕಳು ಹಾದಿ ತಪ್ಪುವ ಸಾಧ್ಯತೆ ಹೆಚ್ಚಾಗಿರುತ್ತದೆ ಎಂದು ಪಾಲಕರಿಗೆ ಎಚ್ಚರಿಸಿದರು.

ಶಾಲೆ ವತಿಯಿಂದ ಕಳೆದ ತಿಂಗಳು ನಡೆಸಿದ್ದ ಪಾಲಕರ ಕ್ರೀಡಾಕೂಟದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಿದ್ದ ಪಾಲಕರಿಗೆ ಸಂಸ್ಥೆ ವತಿಯಿಂದ ಅಭಿನಂದಿಸಲಾಯಿತು. ನಂತರ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು. ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್.ದೀಪ, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಅನಿಲ್, ಶಿಕ್ಷಣ ಸಂಯೋಜಕ ಶ್ರೀನಿವಾಸ್, ಸಿಆರ್‌ಪಿಗಳಾದ ಮಂಜೇಗೌಡ, ಧರ್ಮಪಾಲ್, ಎಚ್.ಎನ್.ಮೂರ್ತಿ, ಕರಿಯಪ್ಪ, ಹಿರಿಯಣ್ಣ, ಖಾಸಗಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಜೀವನ್, ಜ್ಞಾನಪ್ರಭ ಶಾಲೆಯ ಅಧ್ಯಕ್ಷ ಎ.ಜಿ.ಪ್ರಭಾಕರ್, ಕಾರ್ಯದರ್ಶಿ ಹರೀಶ್, ಪ್ರಾಂಶುಪಾಲ ಸಂಜಯ್ ಕ್ರಿಸ್ಟೋಫರ್, ಶಿಕ್ಷಕ ವೃಂದ ಹಾಗೂ ಪಾಲಕರು ಇದ್ದರು.

# ಬ್ಯಾಡ್ಮಿಂಟನ್, ಫುಟ್ಬಾಲ್ ಪಂದ್ಯಾವಳಿ



• ಪ್ರಜೋದಯ ವರದಿ

**ಹಾಸನ:** ಯುವ ಜನರಲ್ಲಿ ಕ್ರೀಡಾ ಆಸಕ್ತಿ ಬೆಳೆಸಿ, ಪ್ರೋತ್ಸಾಹ ನೀಡುವ ಉದ್ದೇಶದಿಂದ ಸಂಕ್ರಾಂತಿ ಹಬ್ಬದ ಪ್ರಯುಕ್ತ ನಗರದ ಹೊಯ್ಸಳ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಹಮ್ಮಿಕೊಂಡಿದ್ದ ಬ್ಯಾಡ್ಮಿಂಟನ್ ಹಾಗು ಫುಟ್ಬಾಲ್ ಪಂದ್ಯಾವಳಿ ಯಶಸ್ವಿಯಾಗಿ ನಡೆಯಿತು.

ನಗರದ ಸಂಗಮೇಶ್ವರ ಬಡಾವಣೆ ಕೆರೆ ಸಮೀಪ ಇರುವ ಅಕಾಡೆಮಿ ಆವರಣದಲ್ಲಿ ಭಾನುವಾರ ನಡೆದ ಟೂರ್ನಿಮೆಂಟ್‌ನಲ್ಲಿ ಚಿಕ್ಕಮಗಳೂರು, ಅರಸೀಕೆರೆ ಸೇರಿ ವಿವಿಧ ತಾಲ್ಲೂಕುಗಳಿಂದ ನೂರಾರು ಕ್ರೀಡಾಪಟುಗಳು ಭಾಗವಹಿಸಿದ್ದರು. ಬೆಳಗ್ಗಿನಿಂದ ಸಂಜೆಯವರೆಗೆ ಉತ್ಸಾಹಭರಿತವಾಗಿ ನಡೆದ ಪಂದ್ಯಾವಳಿಗಳು ಕ್ರೀಡಾಭಿಮಾನಿಗಳ ಗಮನ ಸೆಳೆದವು.

ಬ್ಯಾಡ್ಮಿಂಟನ್ ಟೂರ್ನಿಮೆಂಟ್ ಓಪನ್ ಕ್ಯಾಟಗರಿ, 40 ವರ್ಷ ಮೇಲ್ಪಟ್ಟವರ ವಿಭಾಗ ಹಾಗು ಸಿಂಗಲ್ಸ್ ವಿಭಾಗಗಳಾಗಿ ನಡೆಸಲಾಯಿತು. ತಾಲ್ಲೂಕು ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ 40 ವರ್ಷ ಮೇಲ್ಪಟ್ಟವರ ವಿಭಾಗದಲ್ಲಿ ಹರೀಶ್-ಉಮೇಶ್ ತಂಡ ಪ್ರಥಮ ಸ್ಥಾನ, ರಾಜು-ಮಂಜೇಗೌಡ ದ್ವಿತೀಯ ಸ್ಥಾನ ಪಡೆದರು. ಓಪನ್ ಕ್ಯಾಟಗರಿಯಲ್ಲಿ ಸಚಿನ್-ಶ್ರೇಯಸ್ ಪ್ರಥಮ ಸ್ಥಾನ, ರಾಜು-ಆಯುಷ್ ದ್ವಿತೀಯ ಸ್ಥಾನ ಗಳಿಸಿದರು. ಸಿಂಗಲ್ಸ್ ವಿಭಾಗದಲ್ಲಿ ಆಯುಷ್ ಪ್ರಥಮ ಸ್ಥಾನ, ಪುನೀತ್ ದ್ವಿತೀಯ ಸ್ಥಾನ ಪಡೆದರು.

ಗೆಲುವು ಸಾಧಿಸಿದ ಕ್ರೀಡಾಪಟುಗಳಿಗೆ ಆಕರ್ಷಕ ಟ್ರೋಫಿ ಹಾಗು ಬಹುಮಾನಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಹಾಸನ ಜಿಲ್ಲಾ ಬ್ಯಾಡ್ಮಿಂಟನ್ ಸಂಘದ ಮಾಜಿ ಅಧ್ಯಕ್ಷ ಹೆಚ್.ಕೆ. ಮಹೇಂದ್ರ, ಹಾಸನ ಜಿಲ್ಲಾ ಫುಟ್ಬಾಲ್ ಅಸೋಸಿಯೇಷನ್ ಕಾರ್ಯದರ್ಶಿ ರಾಜೀವ್ ಮಿಸಲಾ, ಅಕಾಡೆಮಿ ವ್ಯವಸ್ಥಾಪಕ ವೇಣುಗೋಪಾಲ್ ಸೇರಿ ಅಕಾಡೆಮಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಶಿಕ್ಷಣದ ಜೊತೆ ಮಾನವೀಯ ಗುಣ ಬೆಳೆಸಿಕೊಳ್ಳಿ

## ವಿದ್ಯಾರ್ಥಿಗಳಿಗೆ ಶಾಸಕ ಹೆಚ್.ಪಿ.ಸ್ವರೂಪ್ ಸಲಹೆ

• ಪ್ರಜೋದಯ ವರದಿ



**ಹಾಸನ:** ಮಕ್ಕಳು ಶಿಕ್ಷಣದ ಜೊತೆ ಮಾನವೀಯ ಗುಣಗಳನ್ನು ಬೆಳೆಸಿಕೊಂಡು ಹಿರಿಯರನ್ನು ಗೌರವಿಸಬೇಕೆಂದು ಶಾಸಕ ಹೆಚ್.ಪಿ.ಸ್ವರೂಪ್ ಅವರು ಸಲಹೆ ನೀಡಿದರು.

ನಗರದ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲೆಯ ಆವರಣದಲ್ಲಿ ನಡೆದ ವಾರ್ಷಿಕೋತ್ಸವ ಸ್ಕಾಲರ್ಸ್ ಸಂಭ್ರಮ-14 ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಿಕ್ಷಣದ ಜೊತೆಗೆ ಕ್ರೀಡೆ ಹಾಗು ಸಾಂಸ್ಕೃತಿಕ ಚಟುವಟಿಕೆಗಳಿಗೆ ಸಮಾನ ಮಹತ್ವ ನೀಡುತ್ತಿರುವ ಸ್ಕಾಲರ್ಸ್ ಶಾಲೆ ಒಂದು ಮಾದರಿ ವಿದ್ಯಾಸಂಸ್ಥೆಯಾಗಿದೆ. ವಿದ್ಯಾರ್ಥಿಗಳಲ್ಲಿ ಉತ್ತಮ ಮೌಲ್ಯಗಳನ್ನು ಬೆಳೆಸುತ್ತಿರುವುದು ಶ್ಲಾಘನೀಯವೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಗತಿ ಪರ ರೈತ ಮಹಿಳೆ ಕವಿತಾ ಮಿಶ್ರ ಅವರು ಮಾತನಾಡಿ, ಜೀವನದಲ್ಲಿ ಏಳುಬೀಳುಗಳು ಬರುವುದು ಸಹಜ. ಆದರೆ, ಬೀಳುವುದನ್ನು ಕಲಿತಾಗಲೇ ಎದ್ದು ನಿಲ್ಲುವ ಛಲ ಬರುತ್ತದೆ. ಕಿಡಿಯನ್ನು ಹೊತ್ತಿಸಿದರೆ ಅದು ಜ್ಯೋತಿಯಾಗಿ ಮನೆ ಬೆಳಗುವಂತೆ, ಹೆಣ್ಣು ಮಕ್ಕಳು ಸಮಾಜವನ್ನು ಬೆಳಗುವ ಶಕ್ತಿಯಾಗಬೇಕು. ರೈತರೂ ಸಹ ಇತರೆ ಕ್ಷೇತ್ರಗಳಂತೆ ಕೋಟಿಗಟ್ಟಲೆ ಆದಾಯ ಗಳಿಸಿ ಗೌರವಯುತ ಬದುಕು ಕಟ್ಟಿಕೊಳ್ಳಬೇಕೆಂಬ ಸಂದೇಶ ನೀಡಿದರು.

ಇಂಜಿನೀಯರ್ ಹುದ್ದೆಯನ್ನು ತ್ಯಜಿಸಿ ಕೃಷಿಯನ್ನು ಜೀವನವನ್ನಾಗಿಸಿಕೊಂಡ ತಮ್ಮ ಅನುಭವವನ್ನು ಹಂಚಿಕೊಂಡ ಅವರು, ರೈತರ ಬದುಕು ಬಿಸಿಲಲ್ಲಿ ಸುಟ್ಟು, ಮಳೆಯಲ್ಲಿ ನೆನೆದು, ಚಳಿಯಲ್ಲಿ ನಡುಗಿ ದೇಶದ ಜನತೆಗೆ ಮೂಲಾಧಾರವಾಗಿರುವುದು ಹೆಮ್ಮೆಯ ಸಂಗತಿ ಎಂದರು.

ಇತಿಹಾಸ ತಜ್ಞ ಧರ್ಮೇಂದ್ರ ಕುಮಾರ್ ಮಾತನಾಡಿ, ಪೋಷಕರು ಮಕ್ಕಳ ಜ್ಞಾನವನ್ನು ಗೌರವಿಸಬೇಕು. ವಿದ್ಯಾರ್ಥಿಗಳ ಗುರಿ ಉತ್ತುಂಗದ ಲ್ಲಿರಬೇಕು. ಗುರಿ ಸಾಧನೆಗೆ ಛಲ, ಪರಿಶ್ರಮ ಮತ್ತು ತ್ಯಾಗ ಅಗತ್ಯ. ತ್ಯಾಗಕ್ಕೆ ಸಿದ್ಧರಾದಾಗ ಮಾತ್ರ ಯಶಸ್ಸು ಸಿಗುತ್ತದೆ ಎಂದರು. ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ವೈಭವದಿಂದ ನಡೆದವು. ಯಕ್ಷಗಾನ, ದೇಶಪ್ರೇಮ ಸಾರುವ ಸುಭಾಷ್ ಚಂದ್ರ ಬೋಸ್ ನೃತ್ಯರೂಪಕ, ಕುವೆಂಪು ಅವರ ನಾಡಗೀತೆಗೆ ನಮನ, ಡಾ. ಬಿ.ಆರ್.ಅಂಬೇಡ್ಕರ್ ಅವರ ಜೀವನಚರಿತ್ರೆ ಆಧಾರಿತ ನೃತ್ಯರೂಪಕ ಸೇರಿ ವಿವಿಧ ನೃತ್ಯ ಪ್ರದರ್ಶನಗಳು ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿದವು.

ಸ್ಕಾಲರ್ಸ್ ಶಾಲೆಯ ಆಡಳಿತಾಧಿಕಾರಿಗಳಾದ ಡಾ.ಹೆಚ್.ಎನ್. ಚಂದ್ರಶೇಖರ್, ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಲಕ್ಷ್ಮೀ ನಾಗರಾಜು ಉಪಸ್ಥಿತರಿದ್ದರು.

# ಮದುವೆಗೆ ವಿರೋಧ : ತಂದೆಯನ್ನೇ ಹತ್ಯೆ ಮಾಡಿದ ಮಗಳು

• ಪ್ರಜೋದಯ ವರದಿ

**ಬೇಲೂರು:** ಪ್ರೀತಿಸಿದವನನ್ನು ಮದುವೆಯಾಗಲು ತಂದೆ ವಿರೋಧ ವ್ಯಕ್ತಪಡಿಸಿದ್ದಕ್ಕೆ ಅಪ್ಪನನ್ನೇ ಮಗಳು, ಆಕೆಯ ಪ್ರಿಯಕರ ಸೇರಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ತಾಲ್ಲೂಕಿನ ಬೆಳ್ಳಾವರ ಗ್ರಾಮದಲ್ಲಿ ನಡೆದಿದೆ. ಅನಿಲ್ (46) ಕೊಲೆಯಾದ ದುರ್ದೈವಿ. ಅವರ ಸಂಬಂಧಿ ರಾಜೇಶ್ (30) ಎಂಬಾತನೇ ಕೊಲೆ ಆರೋಪಿ.

ಮೃತ ಅನಿಲ್ ಅವರ ಪುತ್ರಿ, ಅನಿಷಾ ಹಾಗು ರಾಜೇಶ್ ಪರಸ್ಪರ ಪ್ರೀತಿಸುತ್ತಿದ್ದರು. ಈ ಹಿಂದೆ ಅವರಿಬ್ಬರ ಮದುವೆಯ ಕುರಿತು ಕುಟುಂಬಗಳಲ್ಲಿ ಮಾತುಕತೆ ನಡೆದಿತ್ತಾದರೂ, ಆ ಸಮಯದಲ್ಲಿ ಅನಿಷಾ ಅಪ್ರಾಪ್ತಳಾಗಿದ್ದ ಕಾರಣ ಮದುವೆ ಮುಂದೂಡಲಾಗಿತ್ತು. ಆದರೆ, ಇತ್ತೀಚೆಗೆ ಅನಿಷಾಗೆ 18 ವರ್ಷ ತುಂಬಿದರೂ, ತಂದೆ ಅನಿಲ್ ಮಗಳನ್ನು ಬೇರೆ ಯುವಕನೊಂದಿಗೆ ಮದುವೆ ಮಾಡಲು ಸಿದ್ಧತೆ ನಡೆಸಿದ್ದರು. ತಂದೆಯ ಈ ನಿರ್ಧಾರದಿಂದ ಅಸಮಾಧಾನಗೊಂಡ ಅನಿಷಾ, ಮನೆಯನ್ನು ತೊರೆದು ರಾಜೇಶ್‌ನ ಮನೆ ಸೇರಿಕೊಂಡಿದ್ದಳು. ಕಳೆದ ಗುರುವಾರ ರಾತ್ರಿ, ರಾಜೇಶ್‌ನ ಮನೆಯಲ್ಲಿದ್ದ ಮಗಳನ್ನು ಮರಳಿ ತಮ್ಮ ಮನೆಗೆ ಕರೆತರಲು ಅನಿಲ್ ಬೆಳ್ಳಾವರ ಗ್ರಾಮಕ್ಕೆ ತೆರಳಿದ್ದಾರೆ. ಈ ವೇಳೆ ತಂದೆಯ ಜೊತೆ ಹೋಗಲು ಅನಿಷಾ ನಿರಾಕರಿಸಿದ್ದರಿಂದ ತಂದೆ-ಮಗಳ ನಡುವೆ ತೀವ್ರ ಮಾತಿನ ಚಕಮಕಿ ನಡೆದಿದೆ. ಈ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ರಾಜೇಶ್ ಹಾಗು ಅನಿಲ್ ನಡುವೆ ಗಲಾಟೆಯಾಗಿದೆ. ಜಗಳದ ನಡುವೆ ರಾಜೇಶ್ ಮತ್ತು ಇತರ ಆರು ಮಂದಿ ದೊಣ್ಣೆಯಿಂದ ಹೊಡೆದು, ಚಾಕುವಿನಿಂದ ಹೊಟ್ಟೆಯ ಭಾಗಕ್ಕೆ ಆರೇಳು ಬಾರಿ ಇರಿಯ ಲಾಗಿದೆ. ಗಂಭೀರವಾಗಿ ಗಾಯಗೊಂಡಿದ್ದ ಅನಿಲ್ ಅವರನ್ನು ಕುಟುಂಬದವರು ಮೊದಲು ಬೇಲೂರು, ನಂತರ ಹಾಸನ ಮತ್ತು ಕೊನೆಗೆ ಮಂಗಳೂರಿನ ವೆನ್ಲಾಕ್ ಆಸ್ಪತ್ರೆಗೆ ದಾಖಲಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಶನಿವಾರ ಅವರು ಮೃತ ಪಟ್ಟಿದ್ದಾರೆ. ಘಟನೆಯ ಬಗ್ಗೆ ಮಾಹಿತಿ ತಿಳಿದ ಅರೇಹಳ್ಳಿ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಆರೋಪಿ ರಾಜೇಶ್‌ನನ್ನು ವಶಕ್ಕೆ ಪಡೆದು ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

# ಪ್ರಪಂಚದ ವಾಸ್ತವಗಳನ್ನು ಮಕ್ಕಳಿಗೆ ತಿಳಿಸಿ

## ಪೋಷಕರಿಗೆ ಶ್ರೀ ನಿಶ್ಚಲನಂದನಾಥ ಸ್ವಾಮೀಜಿ ಸಲಹೆ

• ಪ್ರಜೋದಯ ವರದಿ



**ಹಾಸನ:** ಮಕ್ಕಳು ಕೇಳಿದ ಎಲ್ಲವನ್ನೂ ಸುಲಭವಾಗಿ ಕೊಡಿಸುವ ಪ್ರವೃತ್ತಿ ಅಪಾಯಕಾರಿ ಪರಿಣಾಮ ಉಂಟು ಮಾಡುತ್ತದೆ. ಪೋಷಕರು ತಮ್ಮ ಜೀವನದ ಕಷ್ಟಗಳು, ಪ್ರಪಂಚದ ವಾಸ್ತವಗಳನ್ನು ಮಕ್ಕಳಿಗೆ ತಿಳಿಸಬೇಕೆಂದು ವಿಶ್ವ ಒಕ್ಕಲಿಗ ಮಹಾ ಸಂಸ್ಥಾನ ಮಠದ ಶ್ರೀ ನಿಶ್ಚಲನಂದನಾಥ ಸ್ವಾಮೀಜಿ ಅವರು ತಿಳಿಸಿದರು.

ನಗರದ ಸ್ಕಾಲರ್ಸ್ ಇಂಟರ್ ನ್ಯಾಷನಲ್ ಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ಕಾಲರ್ಸ್ ಸಂಭ್ರಮ-14 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹಿಂದಿನ ದಿನಗಳಲ್ಲಿ ಶಿಕ್ಷಣ ಸೀಮಿತವಾಗಿದ್ದರೂ ಮಾನವೀಯತೆ, ಮೌಲ್ಯಗಳು, ದೇಶಪ್ರೇಮ ಹಾಗು ಸಮಾಜಮುಖಿ ಚಿಂತನೆ ಇತ್ತು. ಇಂದಿನ ಶಿಕ್ಷಣ ಜಾಗತಿಕವಾಗಿದ್ದರೂ ಸಮಾಜದತ್ತ ಹೊಣೆಗಾರಿಕೆ ಕಡಿಮೆಯಾಗುತ್ತಿದೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ಮಕ್ಕಳಿಗೆ ಸ್ವತಂತ್ರವಾಗಿ ಬದುಕುವ ಪಾಠ ಕಲಿಸಬೇಕು. ಕೆಲ ಅಗತ್ಯಗಳನ್ನು ಪೂರೈಸಿ ಉಳಿದವುಗಳ ಬಗ್ಗೆ ಪೋಷಕರ ಕಷ್ಟಗಳನ್ನು ವಿವರಿಸಬೇಕು. ಹಣವನ್ನು ಅತಿಯಾಗಿ ಬಳಸುವ ಪ್ರವೃತ್ತಿ ಮಕ್ಕಳ ಮನಸ್ಸಿನ ಮೇಲೆ ದುಷ್ಪರಿಣಾಮ ಬೀರುತ್ತದೆ. ಪ್ರಾರ್ಥನೆಗಿಂತ ಪ್ರಯತ್ನವೇ ಹೆಚ್ಚಿನ ಫಲ ನೀಡುತ್ತದೆ. ಕೈ ಕೆಸರಾದರೆ ಬಾಯಿ ಮಸರು ಎಂಬ ಮೌಲ್ಯವನ್ನು ಮಕ್ಕಳಲ್ಲಿ ಬೆಳೆಸಬೇಕೆಂದು ಕರೆ ನೀಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಚ್.ಎಲ್. ಮಲ್ಲೇಶಗೌಡ ಅವರು ಮಾತನಾಡಿ, ಓದಿನ ಜೊತೆಗೆ ಜೀವನ ಪಾಠವೂ ಮುಖ್ಯ. ಹತ್ತನೇ ತರಗತಿಯ ನಂತರ ಬರುವ ದೊಡ್ಡ ಜೀವನ ಪರೀಕ್ಷೆಗೆ ವಿದ್ಯಾರ್ಥಿಗಳು ಸಿದ್ಧರಾಗಬೇಕು. ಶಿಕ್ಷಕರು ವೈದ್ಯರಂತೆ ಮಕ್ಕಳನ್ನು ಕಾಳಜಿಯಿಂದ ನೋಡಿಕೊಳ್ಳುತ್ತಾರೆ. ಪಾಠ ಅರ್ಥವಾಗದಿದ್ದರೆ ತಕ್ಷಣವೇ ಪ್ರಶ್ನಿಸುವ ಮನೋಭಾವ ಇರಬೇಕೆಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳಿಂದ ನಡೆಸಲಾದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರನ್ನು ಆಕರ್ಷಿಸಿದವು. ಶಾಲೆಯ ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಲಲಿತಾ ನಾಗರಾಜು, ರಾಮೇಗೌಡ, ಆಡಳಿತಾಧಿಕಾರಿ ಡಾ.ಹೆಚ್.ಎನ್. ಚಂದ್ರಶೇಖರ್ ಉಪಸ್ಥಿತರಿದ್ದರು.

# ಅಪಘಾತದಲ್ಲಿ ಗಾಯಗೊಂಡವರಿಗೆ ನೆರವಾದ ಶಾಸಕ ಸಿಮೆಂಟ್ ಮಂಜು



• ಪ್ರಜೋದಯ ವರದಿ

**ಸಕಲೇಶಪುರ:** ರಸ್ತೆ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಯುವಕರಿಬ್ಬರನ್ನು ಆಸ್ಪತ್ರೆಗೆ ರವಾನಿಸಿ ಶಾಸಕ ಸಿಮೆಂಟ್ ಮಂಜು ಮಾನವೀಯತೆ ಮೆರೆದ ಘಟನೆ ಶನಿವಾರ ತಾಲ್ಲೂಕಿನ ಮಜಗಹಳ್ಳಿ ಬಳಿ ನಡೆದಿದೆ.

ಕಾರ್ಯಕ್ರಮದ ನಿಮಿತ್ತ ಸಕಲೇಶಪುರದಿಂದ ದೇವಾಲದಕೆರೆಗೆ ತೆರಳುತ್ತಿದ್ದ ವೇಳೆ, ಬೈಕ್‌ನಿಂದ ಬಿದ್ದ ಪರಿಣಾಮ ಯುವಕರಿಬ್ಬರಿಗೆ ಗಂಭೀರ ಗಾಯಗಳಾಗಿದ್ದವು. ಗಮನಿಸಿದ ಶಾಸಕ ಸಿಮೆಂಟ್ ಮಂಜು ತಕ್ಷಣ ವಾಹನದಿಂದ ಇಳಿದು, ಗಾಯಾಳುಗಳ ರಕ್ಷಣೆಗೆ ಮುಂದಾದರು. ರಸ್ತೆಯಲ್ಲೇ ಗಂಭೀರವಾಗಿ ಗಾಯಗೊಂಡು ಬಿದ್ದಿದ್ದ ಯುವಕ ನನ್ನು ಶಾಸಕರೇ ಎತ್ತಿ ಆ್ಯಂಬುಲೆನ್ಸ್‌ಗೆ ಕೂರಿಸಿ ಆಸ್ಪತ್ರೆಗೆ ಕಳುಹಿಸಿದರು.

ಗಾಯಗೊಂಡ ಯುವಕರು ಹಾನುಬಾಳು ಹೋಬಳಿಯೊಂದರಲ್ಲಿ ಇರುವ ರೆಸಾರ್ಟ್‌ನಲ್ಲಿ ಕೆಲಸ ಮಾಡುತ್ತಿದ್ದು, ಹಾನುಬಾಳು ಕಡೆಯಿಂದ ದೇವಾಲದಕೆರೆಗೆ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ.

# ವಿಜೃಂಭಣೆಯಿಂದ ಜರುಗಿದ ಕುಮಾರಲಿಂಗೇಶ್ವರಸ್ವಾಮಿ ಜಾತ್ರೆ

• ಪ್ರಜೋದಯ ವರದಿ



**ಸಕಲೇಶಪುರ :** ಹೆತ್ತೂರು ಗ್ರಾಮದಲ್ಲಿರುವ ಶ್ರೀ ಕುಮಾರ ಲಿಂಗೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಗ್ರಾಮದಲ್ಲಿ ಎರಡು ದಿನಗಳ ಕಾಲ ನಡೆದ ಜಾತ್ರಾ ಮಾಹೋತ್ಸವದ ಹೋಮ, ಹವನ, ಕಳಶ ಪೂಜೆ, ರೈತರು ಹೊಸದಾಗಿ ಬೆಳೆದ ಭತ್ತ, ಹಣ್ಣು, ತರಕಾರಿ ಮಾದಲಾದ ಬೆಳೆಗಳನ್ನು ಒಂದೆಡೆ ಕಲೆ ಹಾಕಿ ಪ್ರಸಾದ ತಯಾರಿಸಿ ದೇವರಿಗೆ ನೈವೇದ್ಯ ಮಾಡಿದ ನಂತರ ಅನ್ನಸಂತರ್ಪಣೆ ನೆರವೇರಿಸಲಾಯಿತು.

ಗ್ರಾಮದ ಮಂದೇ ಪಟೇಲ್ ಅವರ ಮನೆಯಿಂದ ದೇವರ ಉತ್ಸವ ಮೂರ್ತಿಯನ್ನು ತಂದು ಪೂಜೆ ಸಲ್ಲಿಸಿ ಮಲೆನಾಡಿನ ವಾದ್ಯ ಸುಗ್ಗಿ ಕುಣಿತಗಳೊಂದಿಗೆ ಉತ್ಸವ ಮೂರ್ತಿಯನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ದೇವಸ್ಥಾನಕ್ಕೆ ಕರೆತರಲಾಯಿತು. ನಂತರ ಗ್ರಾಮದ ಸಾಂಪ್ರಾದಾಯಿಕ ದೇವರ ಹಾದಿಯಲ್ಲಿ ಮಲೆನಾಡ ವಾದ್ಯ, ಕೊಂಬು, ಕಹಳೆ ನಾದಗಳೊಂದಿಗೆ ಜಾತ್ರೆ ಮೈದಾನದಲ್ಲಿರುವ ದೇವಸ್ಥಾನದವರೆಗೆ ಮೆರವಣಿಗೆ ನಡೆಸಲಾಯಿತು.

ಮೆರವಣಿಗೆ ಸಾಗುತ್ತಿದ್ದ ದಾರಿಯುದ್ದಕ್ಕೂ ಭಕ್ತರು ಸಾವಿರ ಸಂಖ್ಯೆಯಲ್ಲಿ ಸೇರಿಕೊಂಡು ವಾದ್ಯಗಳ ನಾದಕ್ಕೆ ಹೆಜ್ಜೆ ಇಡುತ್ತಾ ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ಜಾತ್ರೆ ಮುಗಿದ ನಂತರ ಸಂಜೆ ದೇವರ ಮೂರ್ತಿಯನ್ನು ಶ್ರೀ ಮಲ್ಲೇಶ್ವರ ದೇವಸ್ಥಾನವರೆಗೆ ಹೊತ್ತು ತಂದು ಉತ್ಸವವನ್ನು ಮುಕ್ತಾಯಗೊಳಿಸಲಾಯಿತು. ದೇವಸ್ಥಾನ ಹಾಗು ಜಾತ್ರೆ ಮೈದಾನವನ್ನು ತಳಿರು ತೋರಣ, ಬಗೆ ಬಗೆಯ ಹೂವುಗಳಿಂದ ಅಲಂಕರಿಸಲಾಗಿತ್ತು. ಹೆತ್ತೂರು, ಕೊಣಬನಹಳ್ಳಿ, ಹಳ್ಳಿಯೂರು, ಹಾಡ್ಲಹಳ್ಳಿ, ಹಾಡ್ಯ, ಹಳ್ಳಿಗದ್ದೆ ಹಾಗೂ ಸುತ್ತಮುತ್ತಲ ಹತ್ತಾರು ಗ್ರಾಮಗಳಿಂದ ಬಂದಿದ್ದ ಭಕ್ತರು ಜಾತ್ರೆಗೆ ಅಣಿ ಮಾಡುವ ಕಾಯಕದಲ್ಲಿ ಪಾಲ್ಗೊಂಡಿದರು. ಜಾತ್ರೆಯ ದಿನ ಮಾತ್ರ ಕುಮಾರ ಲಿಂಗೇಶ್ವರ ಸ್ವಾಮಿಯ ದರ್ಶನ ಇರುವುದರಿಂದ ತಾಲ್ಲೂಕು ಒಳಗೊಂಡಂತೆ ರಾಜ್ಯದ ವಿವಿಧ ಭಾಗಗಳಿಂದ ಬಂದಿದ್ದ ಭಕ್ತರು ಶ್ರದ್ಧಾಭಕ್ತಿಯಿಂದ ಉತ್ಸವದಲ್ಲಿ ಭಾಗಿಯಾಗಿ ಪೂಜೆ, ಹರಕೆಗಳನ್ನು ಸಲ್ಲಿಸಿದರು.

ಹೈಕೋರ್ಟ್ ನ್ಯಾಯಮೂರ್ತಿ ಹೆಚ್.ಪಿ ಸಂದೇಶ್, ಕಾರ್ಮಿಕ ಆಯುಕ್ತ ನಾಗೇಶ್, ಕೆಇಎಸ್ ಅಧಿಕಾರಿ ಹೆಚ್.ಇ.ಕೃಷ್ಣ ಮೂರ್ತಿ, ಶಾಸಕ ಸಿಮೆಂಟ್ ಮಂಜು, ಕನ್ನಡ ರಾಜ್ಯೋತ್ಸವ ಪುರಸ್ಕೃತ ಡಾ.ರಂಗಸ್ವಾಮಿ, ಮಾಜಿ ಶಾಸಕ ಹೆಚ್.ಕೆ. ಕುಮಾರಸ್ವಾಮಿ, ಗ್ಯಾರಂಟಿ ಯೋಜನಾ ಸಮಿತಿ ತಾಲ್ಲೂಕು ಅಧ್ಯಕ್ಷ ಮುರಳಿ ಮೋಹನ್ ಇದ್ದರು.

# ಥ್ರೋಬಾಲ್: ಫೈಡ್ ಕಾಲೇಜಿಗೆ ಕಂಚಿನ ಪದಕ

• ಪ್ರಜೋದಯ ವರದಿ

**ಹಾಸನ:** ಪದವಿ ಪೂರ್ವ ಕಾಲೇಜುಗಳ ಬಾಲಕರ ವಿಭಾಗದ ರಾಜ್ಯಮಟ್ಟದ ಥ್ರೋಬಾಲ್ ಪಂದ್ಯಾವಳಿಯಲ್ಲಿ ನಗರದ ಫೈಡ್ ಕಾಲೇಜಿನ ವಿದ್ಯಾರ್ಥಿಗಳ ತಂಡವು ಅತ್ಯುತ್ತಮ ಪ್ರದರ್ಶನ ನೀಡಿ 3ನೇ ಸ್ಥಾನ ಪಡೆದು ಕೊಂಡಿದೆ.

ರಾಜ್ಯದ ವಿವಿಧ ಜಿಲ್ಲೆಗಳ ತಂಡಗಳು ಈ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದರೂ, ಫೈಡ್ ಕಾಲೇಜಿನ ತಂಡವು ತನ್ನ ಶಿಸ್ತು, ಕ್ರೀಡಾ ಸಾಮರ್ಥ್ಯದಿಂದ ಗಮನ ಸೆಳೆಯಿತು. ಪ್ರತಿ ಪಂದ್ಯದಲ್ಲೂ ಆತ್ಮವಿಶ್ವಾಸದೊಂದಿಗೆ ಆಡಿದ ವಿದ್ಯಾರ್ಥಿಗಳು ಅಂತಿಮ ಹಂತದವರೆಗೆ ಪೈಪೋಟಿ ನೀಡಿದರು. ಈ ಸಾಧನೆಯ ಹಿನ್ನಲೆ ಕಾಲೇಜಿನ ಆಡಳಿತ ಮಂಡಳಿ, ಪ್ರಾಂಶುಪಾಲರು, ಉಪನ್ಯಾಸಕರು ವಿಜೇತ ತಂಡದ ಸದಸ್ಯರನ್ನು ಅಭಿನಂದಿಸಿ, ಮುಂದಿನ ದಿನಗಳಲ್ಲಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿಯೂ ಸಾಧನೆ ಮಾಡುವಂತೆ ಶುಭಾಶಯ ಕೋರಿದರು.



ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK